♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 06 | ಸಂಚಿಕೆ Issue 303 | ಶನಿವಾರ Saturday | 23-03-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಸೋಲಿನ ಭಯದಲ್ಲಿ ಕಾಂಗ್ರೆಸ್ ಬ್ಯಾಂಕ್ ಖಾತೆ ಸೀಜ್

ದೇಶದ ಜನ ಬಿಜೆಪಿ ತಿರಸ್ಕರಿಸುತ್ತಾರೆ : ಸಿಎಂ

■ ಕಾಯಕಯೋಗಿ ಸುದ್ದಿ

ಬೆಂಗಳೂರು ಮಾ 22: ಸೋಲಿನ ಭಯದಲ್ಲಿ ಕಾಂಗ್ರೆಸ್ ಬ್ಯಾಂಕ್ ಖಾತೆಗಳನ್ನು ಬಿಜೆಪಿ ಸೀಜ್ ಮಾಡಿದೆ. ಈ ಬಾರಿ ಬಿಜೆಪಿಯನ್ನು ದೇಶದ ಜನ ಸ್ಪಷ್ಟವಾಗಿ ತಿರಸ್ಕರಿಸಿ ಭಾರತವನ್ನು ಉಳಿಸುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಕೆಪಿಸಿಸಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ಬ್ರಿಟೀಷರನ್ನು ಭಾರತದಿಂದ ಓಡಿಸಲು ಸುದೀರ್ಘ ಹೋರಾಟ ನಡೆಸಿ ಹುತಾತ್ಮರಾದ, ಜೈಲು ಸೇರಿದ ಚರಿತ್ರೆ ಇರುವ ಪಕ್ಷ ಕಾಂಗ್ರೆಸ್. ಬಿಜೆಪಿ ನಮಗೆ ಎಷ್ಟೇ ತೊಂದರೆ ಕೊಟ್ಟರೂ ಕಾಂಗ್ರೆಸ್ ಕಾರ್ಯಕರ್ತರು ಹೋರಾಟದ ಹಾದಿಯಲ್ಲೇ ಎಲ್ಲವನ್ನೂ ಎದುರಿಸಲಿದ್ದಾರೆ ಎಂದರು.

ಪ್ರಜಾಪ್ರಭುತ್ವದಲ್ಲಿ ಜನಾಭಿಪ್ರಾಯ ಅಂತಿಮ. ಕಾಂಗ್ರೆಸ್ ಜನರಿಂದ ಹಣ ಸಂಗ್ರಹಿಸಿದೆ. ಜನರು ಸ್ವಯಂಪ್ರೇರಿತವಾಗಿ ಕೊಟ್ಟ ಹಣ ಕಾಂಗ್ರೆಸ್ ಖಾತೆಯಲ್ಲಿತ್ತು. ಸಣ್ಣ ತಾಂತ್ರಿಕ ಕಾರಣ ನೀಡಿ ಇಡೀ ಖಾತೆಯನ್ನು ಸೀಜ್ ಮಾಡಿರುವುದು ಸರ್ವಾಧಿಕಾರಿ ಧೋರಣೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಪಕ್ಷ ಚುನಾವಣೆ ನಡೆಸದಂತೆ ಬಿಜೆಪಿ ಈ ರೀತಿಯ ತೊಂದರೆ ಕೊಡುವುದು ಪ್ರಜಾಪ್ರಭುತ್ವಕ್ಕೆ ಮಾರಕ. ಇದು ಖಂಡನೀಯ ಎಂದರು.

ಮನುಸ್ಮೃತಿಯ ಮಾರಕ ಮನಸ್ಥಿತಿ

ಬಿಜೆಪಿ ಮನುಸ್ಮೃತಿಯ ಮಾರಕ ಮನಸ್ಥಿತಿಯನ್ನು ಹೊಂದಿದೆ. ಹೀಗಾಗಿ ಬಿಜೆಪಿಗೆ ಅಸಮಾನತೆ ಇರಬೇಕು, ಜಾತಿ ವ್ಯವಸ್ಥೆ ಗಟ್ಟಿಯಾಗಬೇಕು, ನಿರುದ್ಯೋಗ ಹೆಚ್ಚಾಗಬೇಕು, ರೈತರ ಸಮಸ್ಯೆಗಳಿಗೆ ಪರಿಹಾರ ಸಿಗಬಾರದು. ಈ ಸಮಸ್ಯೆಗಳ ವಿರುದ್ಧ



ಕಾಂಗ್ರೆಸ್ ಹೋರಾಟ ನಡೆಸಬಾರದು ಎನ್ನುವ ಮನಸ್ಥಿತಿ ಬಿಜೆಪಿಯದ್ದಾಗಿದೆ. ಇದಕ್ಕಾಗಿ ಕಾಂಗ್ರೆಸ್ ಪಕ್ಷಕ್ಕೆ ಹಣ ಇಲ್ಲದಂತೆ ಮಾಡಲು ಬ್ಯಾಂಕ್ ಖಾತೆಗಳನ್ನು ಸೀಜ್ ಮಾಡಲಾಗಿದೆ ಎಂದರು.

ಸಿಎಎ, ಪುಲ್ವಾಮಾ, ಅಯೋಧ್ಯೆ ಹೆಸರಲ್ಲಿ ಇನ್ನೂ ಎಷ್ಟು ವರ್ಷ ಭಾರತೀಯರನ್ನು ಭಾವನಾತ್ಮಕವಾಗಿ ಮರಳು ಮಾಡ್ತೀರಿ? ಜನರ ಬದುಕಿನ ಸಮಸ್ಯೆಗಳಿಗೆ ನೆಪಕ್ಕೂ ಸ್ಪಂದಿಸದ ನೀವು ಕೇವಲ ಭಾವನಾತ್ಮಕವಾಗಿ ಕೆರಳಿಸುತ್ತಾ ಇದ್ದೀರಿ. ಆದರೆ ಭಾರತದ ಜನತೆ ನಿಮ್ಮನ್ನು ಈ ಬಾರಿ ಅಧಿಕಾರದಿಂದ ಕೆಳಗಿಳಿಸಲಿದ್ದಾರೆ ಎಂದರು.

ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಉಪಸ್ಥಿತರಿದ್ದರು.

ಕಾಂಗ್ರೆಸ್ ಸೇರ್ಪಡೆಗೊಂಡ ಜೆಡಿಎಸ್, ಬಿಜೆಪಿ ಕಾರ್ಯಕರ್ತರು

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ನೂರಾರು ಕಾರ್ಯಕರ್ತರು ಇಂದು ಜೆಡಿಎಸ್ ಮತ್ತು ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಗೊಂಡರು.

ಬಿಜೆಪಿ ಜತೆ ಜೆಡಿಎಸ್ ಹೊಂದಾಣಿಕೆ ಮಾಡಿಕೊಂಡಿದ್ದರಿಂದ ಆಕ್ರೋಶಗೊಂಡು ವಿಧಾನ ಪರಿಷತ್ ಸ್ಥಾನಕ್ಕೆ ರಾಜೀನಾಮೆ ನೀಡಿ ಜೆಡಿಎಸ್ ತೊರೆದ ಮರಿತಿಬ್ಬೇಗೌಡ ಅವರು ತಮ್ಮ ಅಪಾರ ಅಭಿಮಾನಿಗಳ ಜತೆ ಇಂದು ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು.



ಮಂಡ್ಯ ಜಿಲ್ಲೆಯ ಜೆಡಿಎಸ್ ಕಾರ್ಯಕರ್ತರ ಜತೆಗೆ ಮಳವಳ್ಳಿ, ಬೆಂಗಳೂರಿನ ರಾಜರಾಜೇಶ್ವರಿ ವಿಧಾನ ಸಭಾ ಕ್ಷೇತ್ರಗಳ ಜೆಡಿಎಸ್ ಮತ್ತು ನಾನಾ ಮೋರ್ಚಾಗಳ ಕಾರ್ತಕರ್ತರನ್ನು ಕಾಂಗ್ರೆಸ್‌ಗೆ ಬರಮಾಡಿಕೊಳ್ಳಲಾಯಿತು.

ಚುಟುಕು ಸುದ್ದಿ

ಬಿಗ್ ಬಾಸ್ ಖ್ಯಾತಿಯ ಸೋನು ಶ್ರೀನಿವಾಸ್ ಗೌಡ ಅರೆಸ್ಟ್

ಬೆಂಗಳೂರು: 'ಬಿಗ್ ಬಾಸ್ ಕನ್ನಡ ಒಟಿಟಿ' ಸೀಸನ್ ಮೂಲಕ ಫೇಮಸ್ ಆದ ಸೋನು ಶ್ರೀನಿವಾಸ್ ಗೌಡ ಅವರು ಅರೆಸ್ಟ್ ಆಗಿದ್ದಾರೆ.

ಹಾನೂನು ಬಾಹಿರವಾಗಿ ಅಮಲು ಮಗುವನ್ನು ದತ್ತು ಪಡೆದಿದ್ದಾರೆ. ಈ ಆರೋ ಪದ ಮೇಲೆ ಅವರನ್ನು ಬಂಧಿಸಲಾಗಿದೆ.

ಬೆಂಗಳೂರಿನ ಬ್ಯಾಡರಹಳ್ಳಿ ಪೊಲೀಸರು ಸೋನು ಶ್ರೀನಿವಾಸ್ ಗೌಡ ಬಂಧನ ಮಾಡಿದ್ದಾರೆ. ಮಗು ದತ್ತು ಪಡೆದಿರುವುದಾಗಿ ಹೇಳಿಕೊಂಡಿದ್ದ ಸೋನು ಗೌಡ ಇತ್ತೀಚೆಗೆ ಹೇಳಿಕೊಂಡಿದ್ದರು. 6ರಿಂದ 8 ವರ್ಷದ ಮಗುವನ್ನು ಕಾನೂನು ಬಾಹಿರವಾಗಿ ಅವರು ಮಗು ದತ್ತು ಪಡೆದಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿ ರಾಜ್ಯ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಗೀತಾ ದೂರು ನೀಡಿದ್ದರು. ಜೆಜೆಆಕ್ಟ್ ಅಡಿ ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಿಸಿಕೊಂಡು ಬಂಧಿಸಿದ್ದಾರೆ

ಲೋಕಸಭೆ ಚುನಾವಣೆ ಹಿನ್ನೆಲೆ ಮೇ 8 ಕ್ಕೆ ನಿಗದಿಯಾಗಿದ್ದ ಪಿಎಸ್ಐ ಪರೀಕ್ಷೆ ಮುಂದೂಡಿಕೆ

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮೇ 8 ಕ್ಕೆ ನಿಗದಿಯಾಗಿದ್ದ ಪಿಎಸ್ಐ ಪರೀಕ್ಷೆಯನ್ನು ಮುಂದೂಡಲಾಗಿದೆ. ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಕಲ್ಯಾಣ ಕರ್ನಾಟಕದ ಪ್ರದೇಶದ ಸ್ಥಳೀಯ ಹುದ್ದೆಗಳನ್ನು ಒಳಗೊಂಡಂತೆ ಒಟ್ಟು 402 ಖಾಲಿ ಹುದ್ದೆಗಳ ನೇರ ನೇಮಕಾತಿಯ ಲಿಖಿತ ಪರೀಕ್ಷೆಯನ್ನು ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸಿದ್ಧತೆ ನಡೆಸಿತ್ತು. ಅದರಂತೆ ಮೇ. 8ಕ್ಕೆ ಪರೀಕ್ಷಾ ದಿನಾಂಕವನ್ನು ನಿಗದಿಗೊಳಿಸಲಾಗಿತ್ತು.

ಆದರೆ ಇದೀಗ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ದೇಶಾದ್ಯಂತ ನೀತಿ ಸಂಹಿತೆ ಜಾರಿಯಲ್ಲಿದೆ. ಈ ಕಾರಣದಿಂದ ಮೇ.8ಕ್ಕೆ ನಡೆಯಬೇಕಿದ್ದ ಎಲ್ಲ ಪರೀಕ್ಷೆಯನ್ನು ಮುಂದೂಡಲಾಗಿದೆ. ಮುಂದಿನ ಪರೀಕ್ಷೆಯ ದಿನಾಂಕವನ್ನು ಪ್ರಾಧಿಕಾರದ ವೈಬ್‌ಸೈಟ್‌ನಲ್ಲಿ ಹೊರಡಿಸಲಾಗುವುದು ಎಂದು ಪ್ರಕಟಣೆ ಹೊರಡಿಸಿದೆ.

ಮೆಟ್ರೋ ಟ್ರಾಕ್ ಗೆ ಜಿಗಿದು ವಿದ್ಯಾರ್ಥಿ ಆತ್ಮಹತ್ಯೆ

ಬೆಂಗಳೂರು: ಉತ್ತರ ಭಾರತದಿಂದ ಕಾನೂನು ಅಧ್ಯಯನಕ್ಕೆ ಬಂದ ಯುವಕ ಒಬ್ಬ ಬೆಂಗಳೂರಿನಲ್ಲಿರುವ ಅತಿಗುಪ್ಪೆ ಮೆಟ್ರೋ ನಿಲ್ದಾಣದಲ್ಲಿರುವ ಮೆಟ್ರೋ ಟ್ರ್ಯಾಕಿಗೆ ಜಿಗಿದು ಆತ್ಮಹತ್ಯೆ ಯತ್ನಿಸಿದ್ದು ಈ ವೇಳೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾನೆ ಎಂದು ವರದಿಯಾಗಿದೆ.

ಗುರುವಾರ ಮಧ್ಯಾಹ್ನ ಎರಡು ಗಂಟೆ ಸುಮಾರಿಗೆ ಟ್ವಿನ್ ಬರುವ ಸಂದರ್ಭದಲ್ಲಿ ಯುವಕ ತ್ಯಕ್ಷ ಟ್ರಾಕ್ ಗೆ ಜಿಗಿದಿದ್ದಾನೆ. ಈ ವೇಳೆ ಆತನಿಗೆ ಗಂಭೀರವಾದ ಗಾಯಗಳಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾನೆ. ಬೆಂಗಳೂರಿನ ಅತ್ತಿಗುಪ್ಪೆ ಮೆಟ್ರೋ ನಿಲ್ದಾಣದಲ್ಲಿ ಈ ಘಟನೆ ನಡೆದಿದೆ. ಬೆಂಗಳೂರಿನ ನೇರಳೆ ಮಾರ್ಗದಲ್ಲಿ ಇರುವ ಈ ಒಂದು ನಿಲ್ದಾಣದಲ್ಲಿ ವೈಟ್‌ಫೀಲ್ಡ್ ಹಾಗೂ ಚಿಲ್ಲಘಟ್ಟ ಮಾರ್ಗ ಮಧ್ಯೆ ಹತ್ತಿಗುಪ್ಪೆ ಮೆಟ್ರೋ ನಿಲ್ದಾಣದಲ್ಲಿ ವ್ಯಕ್ತಿ ಟ್ರಾಕಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಹೇಳಲಾಗುತ್ತಿದೆ. ಸ್ಥಳಕ್ಕೆ ಮೆಟ್ರೋ ನಿಬ್ಬಂದಿ ಅಧಿಕಾರಿಗಳು ಬಂದು ಪರಿಶೀಲನೆ ನಡೆಸುತ್ತಿದ್ದಾರೆ.

ವರದಕ್ಷಿಣೆ ಕಿರುಕುಳ: ಯುವತಿ ಆತ್ಮಹತ್ಯೆ

■ ಕಾಯಕಯೋಗಿ ಸುದ್ದಿ

ಕೆ.ಆರ್.ಪೇಟೆ: ಗಂಡನ ಮನೆಯ ವರದಕ್ಷಿಣೆ ಕಿರುಕುಳದಿಂದ ಬೇಸತ್ತು, ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ

ತಾಲೂಕಿನ ಕಿಕ್ಕೇರಿ ಹೋಬಳಿಯ ಲಿಂಗಾಪುರ ಗ್ರಾಮದ ಬಡ ಕುಟುಂಬದ ಯುವತಿ ಪ್ರೇಮಕುಮಾರಿ (26) ದಿನಾಂಕ 6–3–2022 ರಂದು ಮೈಸೂರು ನಿವಾಸಿ ರಾಘವೇಂದ್ರ ಅವರಿಗೆ ವಿವಾಹವಾಗಿದ್ದ ಪ್ರೇಮಕುಮಾರಿ ಕೆಲವೇ ತಿಂಗಳು ಅನನ್ಯವಾಗಿದ್ದ ಜೋಡಿ ನಂತರ ಪ್ರೇಮ ಕುಮಾರಿ ತಾಯಿಯ ಮನೆಗೆ ಬಿಂದಿರುದಿದ್ದರು ಗಂಡನ ಸೇರಿದಂತೆ ಅವರ ಕುಟುಂಬಸ್ಥರು ನಿರಂತರ ವರದಕ್ಷಿಣೆ ಮತ್ತು ಕೊಲೆ ಬೆದರಿಕೆಯಿಂದ ಬೇಸತ್ತು ದಿನಾಂಕ 20–3–2024 ಬುಧವಾರ ಸುಮಾರು ನಾಲ್ಕು ಗಂಟೆ



ಸಮಯದಲ್ಲಿ ಲಿಂಗಾಪುರ ಗ್ರಾಮದಲ್ಲಿ ಸುಮಾರು ಐದು ಪುಟಗಳ ಡೆತ್ ನೋಟ್ ಬರೆದಿಟ್ಟು ಮೃತ ಪ್ರೇಮಕುಮಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿಷಯ ತಿಳಿಯುತ್ತಲೇ ಸ್ಥಳಕ್ಕೆ ದೌಡಾಯಿಸಿದ ಕಿಕ್ಕೇರಿ ಪೊಲೀಸರು ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ, ಗುರುವಾರ ಲಿಂಗಾಪುರ ಗ್ರಾಮದಲ್ಲಿ ಮೃತ ದುರ್ದೈವಿ ಪ್ರೇಮಕುಮಾರಿ ಅವರ ಅಂತ್ಯ ಸಂಸ್ಕಾರ ನೆರವೇರಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಈ ಘಟನೆಯ ಸಂಬಂಧ ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ಪ್ರೇಮಕುಮಾರಿ ರವರ ಕುಟುಂಬಕ್ಕೆ ಸಾಂತ್ವನ ತಿಳಿಸಲು ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕ ಡಾಲು ರವಿ, ಸಮಾಜ ಸೇವಕ ಆರ್ ಟಿ ಓ ಮಲ್ಲಿಕಾರ್ಜುನ್,ಟಿ ಎ ಪಿ ಸಿ ಎಂ ಎಸ್ ಮಾಜಿ ನಿರ್ದೇಶಕ ಮತ್ತು ಸ್ಥಳೀಯ ಶಾಸಕರ ಸಹೋದರ ಹೆಚ್. ಟಿ ಲೋಕೇಶ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ಬಿ.ಎಸ್ ಧನಂಜಯ್ ಕುಮಾರ್, ಸೇರಿದಂತೆ ಅನೇಕ ಗಣ್ಯರು ಹೋದ ಸಂದರ್ಭದಲ್ಲಿ ಮೃತರ ಕುಟುಂಬಸ್ಥರು ಕಂಬನಿ ಮಿಡಿಯುತ್ತಾ ತಪ್ಪಿಸ್ಥರಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಅಂಗಲಾಚಿ ಮನವಿ ಮಾಡಿದರು.

ಭ್ರಷ್ಟಾಚಾರ ಪ್ರಕರಣ: ಕೇಜ್ರಿವಾಲ್ ಜೈಲು ಪಾಲು

ನವದೆಹಲಿ: ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಭ್ರಷ್ಟಾಚಾರ ಕೇಸಲ್ಲಿ ಬಂಧಿಸಿದ್ದಾರೆ. ಅಕ್ರಮ ಮದ್ಯ ನೀತಿ ಹಗರಣ ಪ್ರಕರಣದಲ್ಲಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಸಿಎಂ ಕೇಜ್ರಿವಾಲ್ ಅಧಿಕಾರದಲ್ಲಿರುವಾಗಲೇ ಬಂಧನಕ್ಕೊಳಗಾದ ಮೊದಲ ಸಿಎಂ ಆಗಿದ್ದಾರೆ.

ಕಳೆದ ಎರಡು ವರ್ಷಗಳಿಂದ ದೆಹಲಿ ರಾಜಕೀಯದಲ್ಲಿ ಅಕ್ರಮ ಮದ್ಯ ನೀತಿ ಹಗರಣ ಸತತವಾಗಿ ಸುದ್ದಿಯಲ್ಲಿದೆ. ಇದೇ ಕೇಸ್‌ನಲ್ಲಿ ಆಮ್ ಆದ್ಮಿ ಪಾರ್ಟಿಯ ಹಲವು ನಾಯಕರು ಜೈಲುಪಾಲಾಗಿದ್ದಾರೆ. ಆಪ್‌ನ ಪ್ರಮುಖ ನಾಯಕ ಮನೀಷ್ ಸಿಸೋಡಿಯಾ ಜೈಲಿನಲ್ಲಿದ್ದು ವರ್ಷಗಳೇ ಕಳೆದಿವೆ. ಈಗ ಅರವಿಂದ್ ಕೇಜ್ರಿವಾಲ್ ಈ ಕೇಸ್‌ನಲ್ಲಿ ಬಂಧಿತರಾಗಿದ್ದಾರೆ. ಇದು ಪ್ರತಿಪಕ್ಷಗಳನ್ನು ದಮನಿಸುವ ಬಿಜೆಪಿ ಸರಕಾರದ ಧೋರಣೆಯ ಭಾಗವಾಗಿದ್ದು, ತನಿಖಾ ಸಂಸ್ಥೆಗಳ ದುರುಪಯೋಗ ಎಂದು ಆಮ್ ಪಕ್ಷ ಹೇಳುತ್ತಾ ಬಂದಿದೆ. ಪ್ರಸ್ತುತ ಕೇಜ್ರಿವಾಲ್ ಬಂಧನ ಬಿಜೆಪಿಯ ಪ್ರತಿಪಕ್ಷಮುಕ್ತ ಯೋಜನೆಯ ಭಾಗವಾಗಿದೆ ಎಂದು ಪ್ರತಿಪಕ್ಷಗಳ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಣ್ಣಾ ಹಜಾರೆ ನೇತೃತ್ವದ ಭ್ರಷ್ಟಾಚಾರ ವಿರೋಧಿ ಚಳುವಳಿಯಲ್ಲಿದ್ದ ಅರವಿಂದ್ ಕೇಜ್ರಿವಾಲ್ ಅದರಿಂದ ಪಡೆದ ಹೆಸರನ್ನೇ ರಾಜಕೀಯಕ್ಕೆ ವೇದಿಕೆಯನ್ನಾಗಿ ಮಾಡಿಕೊಂಡಿದ್ದರು. ದೆಹಲಿಯ 7ನೇ ಸಿಎಂ ಆಗಿ ಅಧಿಕಾರಕ್ಕೆ ಏರಿದ್ದ ಅರವಿಂದ್ ಕೇಜ್ರಿವಾಲ್, ಚುನಾವಣೆಯಲ್ಲಿ ಕಾಂಗ್ರೆಸ್‌ನ ಹಿರಿಯ ನಾಯಕ ಹಾಗೂ ಬಹುಕಾಲ ಸಿಎಂ ಆಗಿದ್ದ ದೀಲಾ ದೀಕ್ಷಿತ್ ಅವರನ್ನು ಸೋಲಿಸಿದ್ದರು.

2015ರಲ್ಲಿ ನಡೆದ ಚುನಾವಣೆಯಲ್ಲಿ ಆಮ್ ಆದ್ಮಿ ಪಾರ್ಟಿ ದೆಹಲಿಯ 70 ಕ್ಷೇತ್ರಗಳ ಪೈಕಿ 67ರಲ್ಲಿ ಗೆಲುವು ಸಾಧಿಸಿತ್ತು. ಅದರೊಂದಿಗೆ ಕೇಜ್ರಿವಾಲ್ ಮತ್ತೆ ಸಿಎಂ ಆಗಿ ಅಧಿಕಾರಕ್ಕೇರಿದರು. 2015ರ ಫೆಬ್ರವರಿ 14ರಂದು ಅವರು 2ನೇ ಬಾರಿಗೆ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡರು. 2020 ರಲ್ಲಿ, ಅವರು ಮೂರನೇ ಬಾರಿಗೆ ದೆಹಲಿಯ ಮುಖ್ಯಮಂತ್ರಿಯಾದರು.

ಕಳಪೆ ಗುಣಮಟ್ಟದ ಔಷಧ ಕಂಪನಿಗಳಿಂದ ಬಿಜೆಪಿಗೆ ಸಾವಿರ ಕೋಟಿ: ಕಾಂಗ್ರೆಸ್

ನವದೆಹಲಿ: ಬಿಜೆಪಿಗೆ 1 ಸಾವಿರ ಕೋಟಿಗೂ ಅಧಿಕ ಮೊತ್ತ ನೀಡಿದ ಒಟ್ಟು 35 ಔಷಧ ತಯಾರಿಕಾ ಕಂಪನಿಗಳಲ್ಲಿ ಏಳು ಕಂಪನಿಗಳು ಕೆಮ್ಮು ಸಿರಪ್ ಹಾಗೂ ರೆಮ್‌ಡೆಸಿವಿರ್ ಸೇರಿದಂತೆ ಕಳಪೆ ಗುಣಮಟ್ಟದ ಔಷಧ ತಯಾರಿಸಿದ ಆರೋಪ ಹೊತ್ತಿವೆ ಎಂದು ಕಾಂಗ್ರೆಸ್ ಹೇಳಿದೆ

ಚುನಾವಣಾ ಆಯೋಗವು ಮಾರ್ಚ್ 14ರಂದು ಬಹಿರಂಗಪಡಿಸಿದ ಚುನಾವಣಾ ಬಾಂಡ್ ಕುರಿತ ಮಾಹಿತಿ ಪ್ರಕಾರ ಸುಮಾರು 35 ಕಂಪನಿಗಳು ಸುಮಾರು ?1 ಸಾವಿರ ಕೋಟಿಯಷ್ಟು ದೇಣಿಗೆಯನ್ನು ಬಾಂಡ್ ಖರೀದಿಸುವ ಮೂಲಕ ನೀಡಿರುವ ಮಾಹಿತಿ ಬಹಿರಂಗಗೊಂಡಿದೆ ಎಂದು ಕಾಂಗ್ರೆಸ್ ವಕ್ತಾರ ಜೈರಾಂ ರಮೇಶ್ ಹೇಳಿದ್ದಾರೆ.

ಇವುಗಳಲ್ಲಿ ಕಳಪೆ ಗುಣಮಟ್ಟದ ಔಷಧ ತಯಾರಿಕೆಯಲ್ಲಿ ತೊಡಗಿರುವ ಏಳು ಕಂಪನಿಗಳು ಇವೆ. ಇವುಗಳು ವ್ಯಾಪಕ ಬಳಕೆಯ ಕೆಮ್ಮಿನ ಸಿರಪ್, ರಕ್ತದೊತ್ತಡ ನಿಯಂತ್ರಕ ಔಷಧಗಳು, ಕೋವಿಡ್-19ರ ಚಿಕಿತ್ಸೆ ಅವಧಿಯಲ್ಲಿ ನೀಡಲಾಗುತ್ತಿದ್ದ ರೆಮ್‌ಡೆಸಿವಿರ್ ಸೇರಿವೆ ಎಂದು ಜೈರಾಂ ರಮೇಶ್ ಹೇಳಿದ್ದಾರೆ.

ಬೈಕ್‌ಗೆ ಮಿಲಿಟರಿ ತರಬೇತಿ ಲಾರಿ ವಾಹನ ಡಿಕ್ಕಿ; ಮಹಿಳೆ ಸಾವು

■ ಕಾಯಕಯೋಗಿ ಸುದ್ದಿ

ನಂಜನಗೂಡು: ಮಿಲಿಟರಿ ತರಬೇತಿ ಲಾರಿ ವಾಹನ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಹಿಂಬದಿಯಲ್ಲಿ ಕುಳಿತಿದ್ದ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಂಜನಗೂಡು ತಾಲ್ಲೂಕಿನ ಚಿನ್ನದಗುಡಿ ಹುಂಡಿ ಗ್ರಾಮದಲ್ಲಿ ನಡೆದಿದೆ.



ಮೃತಪಟ್ಟವರು ಗ್ರಾಮದ ಪಾಪಣ್ಣನಾಯಕರ ಪತ್ನಿ 35 ವರ್ಷದ ಮಂಗಳಮ್ಮ ಮೃತ ಮಹಿಳೆ. 44 ವರ್ಷದ ಪಾಪಣ್ಣನಾಯಕ, 10 ವರ್ಷದ ತೇಜಸ್, 8 ವರ್ಷದ ಲಕ್ಷ್ಮಿ, ಸಣ್ಣಪುಟ್ಟ ಗಾಯಗಳಾಗಿವೆ. ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮಲ್ಲೂಪುರ ಗ್ರಾಮದಿಂದ ನಂಜನಗೂಡಿಗೆ ಬೈಕ್ ನಲ್ಲಿ ಪಾಪಣ್ಣನಾಯಕ ಮತ್ತು ಮಂಗಳಮ್ಮ ತಮ್ಮ ಮಗ ತೇಜಸ್‌ನ ಹಾಗೂ ಮಗಳು ಲಕ್ಷ್ಮಿ ಜೊತೆಗೂಡಿ ಬರುತ್ತಿದ್ದ ವೇಳೆ ತಾಲ್ಲೂಕಿನ ಚಿನ್ನದಗುಡಿ ಹುಂಡಿ ಬಳಿ ಮಿಲಿಟರಿ ಯೋಧರ ತರಬೇತಿ ಲಾರಿ ವಾಹನ ಹಿಂಬದಿಯಿಂದ ಗುದ್ದಿದ ಪರಿಣಾಮ ಪಾಪಣ್ಣ ನಾಯಕ ಮತ್ತು ಮಕ್ಕಳು ರಸ್ತೆಯ ಎಡಭಾಗಕ್ಕೆ ಬಿದ್ದು ಸಣ್ಣಪುಟ್ಟ ಗಾಯಗಳಾಗಿ ಪ್ರಾಣಾಪಾಯದಿಂದ ಪಾರಾಗಿದ್ದರೆ. ಮಂಗಳಮ್ಮ ರಸ್ತೆಯ ಬಲಭಾಗಕ್ಕೆ ಬಿದ್ದಿದಾರೆ. ಇದರಿಂದ ಲಾರಿಯ ಹಿಂಬದಿ ಚಕ್ರ ಅವರ ಹೊಟ್ಟೆ ಮೇಲೆ ಹರಿದು ಅವರು ಸ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 23-03-2024

ಮಂಡ್ಯ

ಇಂದು ಹಿತೈಷಿಗಳ ಸಭೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಜಿಲ್ಲೆಯ ಶಿಕ್ಷಣ, ಸಹಕಾರಿ, ರಂಗಭೂಮಿ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಅವಿಸ್ಮರಣೀಯ ಸೇವೆ ಸಲ್ಲಿಸಿ ರಾಷ್ಟ್ರಕವಿ ಕುವೆಂಪು ಅವರಿಂದ ನಿತ್ಯ ಸಚಿವರೆಂದು ಪ್ರಶಂಸೆಗೊಳಪಟ್ಟಿದ್ದ ಕೆ.ವಿ.ಶಂಕರಗೌಡರ ಮೊಮ್ಮಗ ಕೆ.ಎಸ್.ವಿಜಯ್‌ಆನಂದ್ ಬೆಂಬಲಿಗರು ಹಾಗೂ ಹಿತೈಷಿಗಳ ಸಭೆ ಮಾ.23ರಂದು ನಡೆಯಲಿದೆ.

ನಗರದ ಕಲ್ಲಹಳ್ಳಿಯ ವಿವಿ ನಗರದಲ್ಲಿರುವ ಹೊಂಬಾಳಮ್ಮ ಫಂಕ್ಷನ್ ಹಾಲ್‌ನಲ್ಲಿ ಬೆಳಿಗ್ಗೆ 11 ಗಂಟೆಗೆ ಸಭೆ ನಡೆಯಲಿದ್ದು, ಸಭೆಯ ಅಧ್ಯಕ್ಷತೆಯನ್ನು ಪಿಇಟಿ ಅಧ್ಯಕ್ಷ ಹಾಗೂ ಜಿ.ಪಂ. ಮಾಜಿ ಸದಸ್ಯ ಕೆ.ಎಸ್.ವಿಜಯ್‌ಆನಂದ್ ವಹಿಸಲಿದ್ದಾರೆ.

ಜೆಡಿಎಸ್ ಮೂಲಕ ಸಕ್ರಿಯ ರಾಜಕಾರಣ ಪ್ರವೇಶಿಸಿ ಕೆರಗೋಡು ಜಿ.ಪಂ. ಕ್ಷೇತ್ರದ ಸದಸ್ಯರಾಗಿ ಆಯ್ಕೆಯಾಗಿ ಸ್ಥಾಯಿಸಮಿತಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿರುವ ವಿಜಯ್‌ಆನಂದ್ ಪ್ರಸ್ತುತ ರಾಜ್ಯದ ಪ್ರತಿಷ್ಠಿತ ಶೈಕ್ಷಣಿಕ ಸಂಸ್ಥೆಗಳಲ್ಲೊಂದಾಗಿರುವ ಪಿಇಟಿ ಸಂಸ್ಥೆಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಪ್ರಸಕ್ತ ಲೋಕಸಭೆ ಚುನಾವಣೆ ಎದುರಾಗಿರುವ ಹಿನ್ನೆಲೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಹಾಗೂ ಮಾತೃ ಪಕ್ಷ ಜೆಡಿಎಸ್ ಮುಖಂಡರು ವಿಜಯ್‌ಆನಂದ್ ಅವರನ್ನು ಸೆಳೆಯಲು ಪ್ರಯತ್ನ ನಡೆಸಿದ್ದಾರೆ. ಈ ಹಿನ್ನೆಲೆಯಲ್ಲಿ ತಮ್ಮ ಹಿತೈಷಿಗಳು ಹಾಗೂ ಬೆಂಬಲಿಗರ ಸಭೆ ಕರೆದಿದ್ದು ಸಭೆಯ ಅನಿಸಿಕೆಗಳನ್ನು ಆಲಿಸಿ ಭವಿಷ್ಯದ ರಾಜಕೀಯ ನಿರ್ಧಾರ ಕೈಗೊಳ್ಳುವ ನಿರೀಕ್ಷೆ ಇದೆ.

ಈ ಹಿನ್ನೆಲೆಯಲ್ಲಿ ಮಾ.23ರಂದು ನಡೆಯಲಿರುವ ಸಭೆ ಕುತೂಹಲ ಮೂಡಿಸಿದೆ. ಸಭೆಯಲ್ಲಿ ಜೆಡಿಎಸ್ ತಾಲ್ಲೂಕು ಘಟಕದ ಮಾಜಿ ಅಧ್ಯಕ್ಷ ತಿಮ್ಮೇಗೌಡ, ನಗರಸಭಾ ಸದಸ್ಯ ಪೂರ್ಣಚಂದ್ರ ಸೇರಿದಂತೆ ಹಲವು ನಗರಸಭಾ ಸದಸ್ಯರು ಮತ್ತು ಸ್ಥಳೀಯ ಸಂಸ್ಥೆಯ ಜನಪ್ರತಿನಿಧಿಗಳು ಮುಖಂಡರು ಪಾಲ್ಗೊಳ್ಳಲಿದ್ದಾರೆ.

ಗೆಂಡೇಹೊಸಹಳ್ಳಿ ಪಕ್ಷಿಧಾಮದಲ್ಲಿ 'ಪರಿಸರ ನಡಿಗೆ' ಕಾರ್ಯಕ್ರಮ

ಮಂಡ್ಯ : ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ, ಮೈಸೂರಿನ ಅರಣ್ಯ ಇಲಾಖೆ ವನ್ಯಜೀವಿ ವಿಭಾಗ ಹಾಗೂ ಬನ್ನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ವತಿಯಿಂದ ವಿಶ್ವ ಅರಣ್ಯ ದಿನ, ವಿಶ್ವ ಜಲದಿನದ ನಿಮಿತ್ತ 'ಪರಿಸರ ನಡಿಗೆ' ಕಾರ್ಯಕ್ರಮವನ್ನು ಮಾ. 23ರ ಬೆಳಿಗ್ಗೆ 9 ಗಂಟೆಗೆ ಶ್ರೀರಂಗಪಟ್ಟಣ ತಾಲ್ಲೂಕಿನ ಗೆಂಡೇಹೊಸಹಳ್ಳಿಯ ಪಕ್ಷಿಧಾಮದಲ್ಲಿ ಹಮ್ಮಿಕೊಳ್ಳಲಾಗಿದೆ.

ಪರಿಸರ ನಡಿಗೆ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ಸಸ್ಯ ಸಂಕುಲ, ಪಕ್ಷಿ ಸಂಕುಲಗಳ ಪರಿಚಯ, ಎನ್‌ಎಸ್ ಎಸ್ ಸ್ವಯಂ ಸೇವಕರುಗಳಿಂದ ಪ್ಲಾಸ್ಟಿಕ್ ನಿಷೇಧ ಕುರಿತು ಪ್ರಬಂಧನ, ಜನಪದ ಕಲಾವಿದರುಗಳಿಂದ ಪರಿಸರ ಜಾಗೃತಿ ಮೂಡಿಸುವ ಗೀತಗಾಯನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಅಧ್ಯಕ್ಷ ಮಂಗಲ ಎಂ.ಯೋಗೀಶ್ ತಿಳಿಸಿದ್ದಾರೆ.

ಬರಗಾಲ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲ

■ ಕಾಯಕಯೋಗಿ ಸುದ್ದಿ



ಮಂಡ್ಯ : ಬರಗಾಲ ನಿರ್ವಹಿಸುವಲ್ಲಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಬಿಜೆಪಿ ಜಿಲ್ಲಾ ವಕ್ತಾರ ಸಿ.ಟಿ. ಮಂಜುನಾಥ್ ಆರೋಪಿಸಿದ್ದಾರೆ.

ಬಿಜೆಪಿ ವತಿಯಿಂದ ನಗರದ ವಿವಿಧ ಬಡಾವಣೆಗಳಲ್ಲಿ ಭಾರತದ ಸಮಸ್ತ ದೇಶವಾಸಿಗಳಿಗೆ ಪ್ರಧಾನಿ ಮೋದಿಯವರ ಪತ್ರ ತಲುಪಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಭೀಕರ ಬರಗಾಲ ಇದೆ. 800ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಉತ್ತರ ಕರ್ನಾಟಕದಲ್ಲಿ ಬರದ ಸಮಸ್ಯೆಯಿಂದ ಕುಡಿಯುವ ನೀರಿಗೂ ಹಾಹಾಕಾರ ಇದೆ. ರಾಜ್ಯದ ಮುಖ್ಯಮಂತ್ರಿಗಳು ತಮ್ಮ ಜವಾಬ್ದಾರಿ ಮರೆತಿದ್ದಾರೆ ಎಂದು ದೂರಿದರು.

ಡಿ.ಕೆ.ಶಿವಕುಮಾರ್ ಅವರು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಕ್ಕೆ ತಮ್ಮನ್ನು ಸೀಮಿತಗೊಳಿಸಿದ್ದಾರೆ. ಬೆಂಗಳೂರಿನ ನೀರಿನ ಸಮಸ್ಯೆಯತ್ತ ಗಮನ ಕೊಡುತ್ತಿಲ್ಲ. ಕುಡಿಯುವ ನೀರಿನ ವಿಚಾರದಲ್ಲೂ ರಾಜಕೀಯ ಮಾಡುತ್ತಿದ್ದಾರೆ ಎಂದು ದೂರಿದರು.

ಬರಗಾಲ ಪೀಡಿತ ಎಂದು ಘೋಷಿಸುವ ಮೊದಲು ಅಳೆದು ತೂಗಿ 3 ತಿಂಗಳು ಮುಂದೆ ಹಾಕಿದ್ದರು. ರಾಜ್ಯ ಸರ್ಕಾರದಲ್ಲಿ ಹಣ ಇಲ್ಲದ ಕಾರಣ ರೈತರಿಗೆ ಪರಿಹಾರ ನೀಡುವಲ್ಲಿ ವಿಳಂಬ ಮಾಡಿದ್ದಾರೆ ಎಂದು ಟೀಕಿಸಿದರು.

ಸರ್ಕಾರವೇ 223 ತಾಲೂಕುಗಳನ್ನು ಬರಪೀಡಿತ ಎಂದು ಪ್ರಕಟಿಸಿದೆ. ಎಷ್ಟು ಜನ ಸಚಿವರು ಜಿಲ್ಲೆಗೆ ಹೋಗಿ ಬರಗಾಲ ಎದುರಿಸಲು, ಬರದ ಬವಣೆ ನೀಗಿಸಲು ಯೋಜನೆ ರೂಪಿಸಲು ಮುಂದಾಗಿದ್ದಾರೆ, ಎಷ್ಟು ಸಚಿವರು ಬರಪೀಡಿತ ತಾಲೂಕುಗಳಿಗೆ ಪ್ರವಾಸ ಮಾಡಿದ್ದಾರೆ. ಕುಡಿಯುವ ನೀರಿಗೆ ಆಹಾಕಾರ ಇದೆ. ಜನಸಾಮಾನ್ಯರ ಹಾಹಾಕಾರ ನೀಗಿಸುವ ಅಧಿಕಾರ ಇರುವ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳು ಅವರ ಅಸಮರ್ಥತೆ, ಅಸಹಾಯಕತೆಯನ್ನು ತೋರಿಸುತ್ತಿದ್ದಾರೆ ಎಂದು ದೂರಿದರು.

ಬೆಂಗಳೂರಿನಲ್ಲಿ ಕುಡಿಯುವ ನೀರಿಗೆ ಆಹಾಕಾರ ಶುರುವಾಗಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಂಗಳೂರಿಗೆ ಐಟಿ, ಬಿಟಿ ಸಿಟಿ ಎಂಬ ಹೆಸರಿದೆ. ವ್ಯವಹಾರದ ವಿಷಯದಲ್ಲಿ ಬೆಂಗಳೂರಿಗೆ ಅಧ್ಯತೆ ಕೊಡಲಾಗುತ್ತಿತ್ತು. ಕಾವೇರಿ ನೀರನ್ನು ತಮಿಳುನಾಡಿಗೆ ಬಿಡದಂತೆ ಬಿಜೆಪಿ ಆಗ್ರಹಿಸಿತ್ತು, ಆದರೂ ಇಂಡಿ ಒಕ್ಕೂಟದ ಭಾಗಿದಾರ ಪಕ್ಷವೆಂಬ ಕಾರಣಕ್ಕೆ ಸ್ಟಾಲಿನ್ ಅವರ ಕೋರಿಕೆ ಮೇರೆಗೆ ನೀರನ್ನು ಬಿಟ್ಟಿದ್ದಾರೆ. ಈಗ ಕೇ. 60 ಬೋರ್‌ವೆಲ್‌ಗಳು ಬತ್ತಿ ಹೋಗಿವೆ. ಕುಡಿಯುವ ನೀರಿಗೂ ಆಹಾಕಾರ ಇದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ದುಷ್ಟ ರೈತ ವಿರೋಧಿ, ಬಡವರ ವಿರೋಧಿ ಸರ್ಕಾರಕ್ಕೆ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದ ಜನತೆ ಕಾಂಗ್ರೆಸ್‌ಗೆ ತಕ್ಕ ಉತ್ತರ ಕೊಡುತ್ತಾರೆ ಎಂದು ಎಚ್ಚರಿಕೆ ನೀಡಿದರು.

ಒಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ಆನಂದ್, ಮುಖಂಡರಾದ ನಿತ್ಯಾನಂದ, ವೈರಮುಡಿ, ಎಳ್ಳೇಗೌಡ, ರಜತ್, ನವೀನ್, ಶಿವಲಿಂಗಯ್ಯ ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.

ಮೇಲುಕೋಟೆಯಲ್ಲಿ ಅದ್ದೂರಿ ವೈರಮುಡಿ ಬ್ರಹ್ಮೋತ್ಸವ





■ ಕಾಯಕಯೋಗಿ ಸುದ್ದಿ

ಮಂಡ್ಯಸಹಸ್ರಾರು ಭಕ್ತರ ಸಮ್ಮುಖದಲ್ಲಿ ಗುರುವಾರ ರಾತ್ರಿ ವಿಶ್ವವಿಖ್ಯಾತ ಮೇಲುಕೋಟೆಯ ವೈರಮುಡಿ ಬ್ರಹ್ಮೋತ್ಸವ ವಿಜೃಂಭಣೆಯಿಂದ ನಡೆಯಿತು. ರಾತ್ರಿ 8:30 ಗಂಟೆಗೆ ಬ್ರಹ್ಮೋತ್ಸವ ಆರಂಭವಾಗಿತ್ತು. ಪೂರ್ವ. ಫಲ್ಗುಣಿ ನಕ್ಷತ್ರದಲ್ಲಿ ರಥೋತ್ಸವಕ್ಕೆ ಚಾಲನೆ ನೀಡುತ್ತಿದ್ದಂತೆ ಕಾತರದ ಕಂಗಳಿಂದ ಕಾಯುತ್ತಿದ್ದ ಅಪಾರ ಭಕ್ತರು ಜಯಘೋಷ ಗಳೊಂದಿಗೆ ರಥ ಎಳೆದು ಭಕ್ತಿಭಾವ ಮೆರೆದರು.

ವಿವಿಧ ಬಗೆಯ ಹೂಗಳಿಂದ ಸಿಂಗಾರ ಗೊಂಡಿದ್ದ ಚೆಲುವನಾರಾಯಣಸ್ವಾಮಿ ರಥ ಪ್ರಮುಖ ಆಕರ್ಷಣೆಯಾಗಿತ್ತು. ರಥದಲ್ಲಿ ಯಲ್ಲಿ ಸಾಗುವ ವೇಳೆ ನೂಕು ನುಗ್ಗಲು ಉಂಟಾಯಿತು. ಭಕ್ತರು ಭಕ್ತಿಗೀತೆಗಳನ್ನು ಪಠಿಸುತ್ತಾ ಹೆಜ್ಜೆ ಹಾಕುತ್ತಿದ್ದರು. ದೇವಾಲಯದ ರಾಜಬೀದಿಯ ಇಕ್ಕೆಲ ಗಳಲ್ಲಿ ಹಾಗು ಕಟ್ಟಡಗಳ ಮೇಲೆ ನಿಂತು ಸ್ವಾಮಿಯ ಉತ್ಸವಮೂರ್ತಿ ಹಾಗೂ ಶ್ರೀದೇವಿ-ಭೂದೇವಿ ಅಮ್ಮನವರನ್ನು ಜನರು ಕಣ್ತುಂಬಿಕೊಂಡರು.

ರಥೋತ್ಸವಕ್ಕೆ ಮುನ್ನ ಅಮ್ಮನವರ ಸನ್ನಿಧಿಯ ಬಳಿ ಯಾತ್ರಾ ದಾನ ಕಾರ್ಯಕ್ರಮ ನಡೆಯಿತು. ಇದಾದ ನಂತರ ಚೆಲುವನಾರಾಯಣ ಸ್ವಾಮಿ ದೇವಾಲಯದಲ್ಲಿ ಉತ್ಸವ ಮೂರ್ತಿಗೆ ರಾಜಮುಡಿ ಧಾರಣೆ ಹಾಗೂ ಶ್ರೀದೇವಿ, ಭೂದೇವಿ ಅಮ್ಮ ಮತ್ತು ರಾಮಾನು ಜಾಚಾರ್ಯ ವಿಗ್ರಹಗಳನ್ನು ವಿಶೇಷ ಪುಷ್ಪಗಳಿಂದ ಅಲಂಕರಿಸಲಾಯಿತು.

ಚಿನ್ನಲೇಪಿತ ಸಾರ್ವಭೌಮ ಭತ್ರ ದಾನ: ಮೇಲುಕೋಟೆಗೆ ಸಚಿವ ಚಲುವರಾಯಸ್ವಾಮಿ ದಂಪತಿ ಭೇಟಿ ನೀಡಿ ಮನೆ ದೇವರ ದರ್ಶನ ಪಡೆದು, 5.45 ಕೆ.ಜಿ ಬೆಳ್ಳಿಯಿಂದ ತಯಾರಿಸಿದ ಚಿನ್ನಲೇಪಿತ ಸಾರ್ವಭೌಮ ಭತ್ರವನ್ನು ದಾನ ಮಾಡಿದರು.ಬಳಿಕ ಮಾಧ್ಯಮಕ್ಕೆ ಪ್ರತಿಕ್ರಿಯಿಸಿದ ಸಚಿವ ಚಲುವರಾಯಸ್ವಾಮಿ, "ನಮ್ಮ ಮನೆ ದೇವರು ಚಲುವನಾರಾಯಣ ಸ್ವಾಮಿ.

ಬಹಳ ವರ್ಷದಿಂದ ದೇವಸ್ಥಾನಕ್ಕೆ ಬರುತ್ತಿದ್ದೇವೆ. ವೈರಮುಡಿಗೆ ದೇವಸ್ಥಾನಕ್ಕೆ ಭತ್ರಿ ಕೊಟ್ಟಿದ್ದೇವೆ. ಎಲ್ಲರಿಗೂ ಒಳ್ಳೆಯದಾಗಲಿ. ಮಳೆ, ಬೆಳೆ ಆಗಲಿ, ನಾಡಿಗೆ ಒಳ್ಳೆಯದಾಗಲಿ" ಎಂದರು.

ಚುನಾವಣೆ ಕುರಿತ ಪ್ರಶ್ನೆಗೆ, "ಲೋಕಸಭೆ ಚುನಾವಣೆಗೆ ಸಂಬಂಧಿಸಿ 8 ತಾಲೂಕಿನಲ್ಲಿ ಪ್ರಚಾರ ಮಾಡುತ್ತಿದ್ದೇವೆ. ನಮ್ಮ ಗೆಲುವಿಗೆ ಚಲುವನಾರಾಯಣಸ್ವಾಮಿ ಆಶೀರ್ವಾದ ಕೇಳಿಕೊಂಡಿದ್ದೇವೆ. ಹೆಚ್.ಡಿ.ಕುಮಾರಸ್ವಾಮಿ ನನಗೆ ವೈರಿಯಲ್ಲ. ನಾವು ವೈಯಕ್ತಿಕವಾಗಿ ಸ್ನೇಹಿತರು" ಎಂದು ಹೇಳಿದರು.

ರಥೋತ್ಸವದ ಹಿನ್ನೆಲೆಯಲ್ಲಿ ಭಕ್ತಾದಿಗಳಿಗೆ ಕುಡಿಯುವ ನೀರು, ಶೌಚಾಲಯ ಮೊದಲಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿತ್ತು. ಕಾರು ಹಾಗೂ ಬೈಕ್‌ಗಳಿಗೆ ಪ್ರತ್ಯೇಕ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿತ್ತು. ಬಿಗಿ ಪೊಲೀಸ್ ಭದ್ರತೆ ಕಂಡುಬಂತು.

ಎಥೆನಾಲ್ ಘಟಕ ಸ್ಥಾಪನೆಗೆ ಅಣ್ಣೇಚಾಕನಹಳ್ಳಿ ಕಬ್ಬು ಬೆಳೆಗಾರರ ಒತ್ತಾಯ

■ ಕಾಯಕಯೋಗಿ ಸುದ್ದಿ

ಕೆ.ಆರ್.ಪೇಟೆ: ತಾಲ್ಲೂಕು ಸಂತೇಬಾಚಹಳ್ಳಿ ಹೋಬಳಿ ಅಣ್ಣೇಚಾಕನಹಳ್ಳಿ ಗ್ರಾಮದ ಕಬ್ಬು ಬೆಳೆಗಾರರು ಸಭೆ ಎಥೆನಾಲ್ ಘಟಕ ಸ್ಥಾಪನೆಯ ಬಗ್ಗೆ, ಸಭೆ ಹಮ್ಮಿಕೊಳ್ಳಲಾಗಿತ್ತು.

ಕೆ.ಆರ್.ಪೇಟೆ ತಾಲ್ಲೂಕಿನ ಮಾಕವಳ್ಳಿಯ ಕೋರಮಂಡಲ್ ಸಕ್ಕರೆ ಕಾರ್ಖಾನೆಯು ತಾಲ್ಲೂಕಿನ ರೈತರ ಜೀವನಾಡಿಯಾಗಿದ್ದು ಕಬ್ಬು ಬೇಸಾಯವು ರೈತರ ಆರ್ಥಿಕ ಸ್ಥಿತಿಗತಿ ಉತ್ತಮಗೊಳ್ಳಲು ಕಾರಣವಾಗಿದೆ.

ಸಕಾಲದಲ್ಲಿ ಕಬ್ಬು ಅರೆದು ರೈತರ ಕಬ್ಬಿನ ಬಾಕಿ ಹಣವನ್ನು ಸಂಪೂರ್ಣವಾಗಿ ಪಾವತಿಸಿರುವ ಕೋರಮಂಡಲ್ ಸಕ್ಕರೆ ಕಾರ್ಖಾನೆಯ ಬಾಗಿಲು ಮುಚ್ಚದರೆ ರೈತರಿಗಾಗುವ ಅನಾನುಕೂಲವನ್ನು ಊಹಿಕೊಳ್ಳಲು ಸಾಧ್ಯವಿಲ್ಲ ಅದ್ದರಿಂದ ರೈತರ ಹಿತದೃಷ್ಟಿಯಿಂದ ತಾಲೋಕಿನಲ್ಲಿ ಎಥೆನಾಲ್ ಘಟಕ ಸ್ಥಾಪನೆಗೆ ತಾಲ್ಲೂಕಿನ ರೈತ ಬಾಂಧವರು ಸಹಕರಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಬ್ಬು ಬೆಳೆಗಾರರಾದ ಗ್ರಾಮ ಪಂಚಾಯಿತಿ ಸದಸ್ಯ ನಾಗರಾಜ್, ಕಾಂತರಾಜು, ಆಶೋಕ್ ದುಬೈ ರಾಜೇಶ್ ಶಿವಣ್ಣ ಸತೀಶ್, ಮಂಜೇಗೌಡ ,ಕೋಳಿ ಶಿವಣ್ಣ,ನಿಂಗಪ್ಪ ದಿನೇಶ್, ಚಂದ್ರುಚಿಕ್ಕಳ್ಳಿ ಶಿವರುದ್ರಯ್ಯ ಸೇರಿದಂತೆ ಹಲವಾರು ರೈತರು ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಎಥನಾಲ್ ಘಟಕದ ಆರಂಭದ ಪರವಾಗಿ ತಿಳಿಪಳಿಕೆ ನೀಡುವ ಮೂಲಕ ತಮ್ಮ ಅಭಿಪ್ರಾಯ ಮಂಡಿಸಿದರು.



ಮದ್ದೂರು: ಬೆಟ್ಟದರಸಮ್ಮ ಜಾತ್ರಾ ಮಹೋತ್ಸವ ಸಂಭ್ರಮ

■ ಕಾಯಕಯೋಗಿ ಸುದ್ದಿ



ಮದ್ದೂರು: ತಾಲೂಕಿನ ಬೆಟ್ಟದರಸಮ್ಮನ ಜಾತ್ರಾಮಹೋತ್ಸವ ಅಪಾರ ಭಕ್ತಾಧಿಗಳ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ತಾಲೂಕಿನ ಭೀಮನಕೆರೆ, ಹಳ್ಳಕೆರೆ, ಚುಂಚನಹಳ್ಳಿ, ಕಬ್ಬಾರೆ, ಹಾಗಲಹಳ್ಳಿ, ಅಂಕೇಗೌಡನ ದೊಡ್ಡಿ, ಹಾಗೂ ತೊಪ್ಪನಹಳ್ಳಿ ಗ್ರಾಮ ವ್ಯಾಪ್ತಿಗೆ ಒಳಪಡುವ ಬೆಟ್ಟದರಸಮ್ಮನವರ ಜಾತ್ರಾಮಹೋತ್ಸವ ಕಳೆದ ಹಲವು ದಿನಗಳ ಹಿಂದೆ ಆರಂಭಗೊಂಡಿತು.

ದೇವಾಲಯದ ಆವರಣದಲ್ಲಿ ಹೋಮ ಹವನ ಅಭಿಷೇಕ ಅಲಂಕಾರ ಮಹಾಮಂಗಳಾ ರತಿ ತೀರ್ಥಪ್ರಸಾದ ಇನ್ನಿತರ ಪೂಜಾವಿಧಿ ವಿದಾನಗಳು ನೆರವೇರಿದ ಬಳಿಕ ಹಳ್ಳಕೆರೆ ಗ್ರಾಮದಲ್ಲಿ ಕೊಂಡೋತ್ಸವ ಮುಗಿದ ಬಳಿಕ ಹಲವು ಬಗೆಯ ಪೂಜಾ ಕೈಂಕರ್ಯಗಳು ಜರುಗಿದವು.

ಬುಧವಾರ ಬೆಳ್ಳಿಗ್ಗೆ ಬೆಟ್ಟದರಸಮ್ಮ ಪೂಜಾಪಟವನ್ನು ಬೆಟ್ಟಕ್ಕೆ ಕೊಂಡೋಯ್ದು ಬಳಿಕ ಅಪಾರ ಭಕ್ತಾಧಿಗಳ ಸಮ್ಮುಖದಲ್ಲಿ ದೇವಿಯನ್ನು ಹೂವು ಹೋಂಬಾಳೆ ಸಮೇತ ಅಲಂಕರಿಸಿ ಬೆಟ್ಟದ ಮೂಲ ವಿಗ್ರಹದ ಬಳಿ ಪೂಜಾ ಪುರಸ್ಕಾರಗಳು ನೆರವೇರಿದವು.

7 ಗ್ರಾಮದ ಮಹಿಳೆಯರು ತಂಬಿಟ್ಟು ನಾರತಿ ಮೂಲಕ ಬೆಟ್ಟುತ್ತಿ ಹರಕೆಹವನಗಳನ್ನು ಸಲ್ಲಿಸುತ್ತಿದ್ದು ಎಲ್ಲೆಡೆ ಕಂಡುಬಂದಿತ್ತಲ್ಲದೆ ಹರಕೆ ಹೊತ್ತ ಭಕ್ತಾಧಿಗಳು ಬಾಯಿಬೀಗ ಇನ್ನಿತರ ಪೂಜಾ ಕಾರ್ಯಕ್ರಮಗಳನ್ನು ಕೈಗೊಂಡರು.

ನವ ದಂಪತಿಗಳು ಬೆಟ್ಟದರಸಮ್ಮನಿಗೆ ಜೋಡಿ ಬಾಳೆಹಣ್ಣು ಜವನಗಳನ್ನು, ಎಸೆಯುವುದರ ಮೂಲಕ ವಿಶೇಷವಾಗಿ ಹರಕೆ ತೀರಿಸಿದರಲ್ಲದೆ ತಮಟೆ, ನಗಾರಿ, ವಾದ್ಯ, ಇನ್ನಿತರ ಸಾಂಸ್ಕೃತಿಕ ಕಲಾತಂಡಗಳೊಟ್ಟಿಗೆ ಜಾತ್ರಾಮಹೋತ್ಸವ ನೆರವೇರಿತು.

ರಸ್ತೆಯುದ್ದಕ್ಕೂ ವಿವಿಧ ಗ್ರಾಮದವರು ಭಕ್ತಾಧಿಗಳಿಗೆ ಮಜ್ಜಿಗೆ, ಪಾನಕ, ಕೋಸಂಬರಿ, ಮತ್ತು ನೀರಿನ ಬಾಟಲ್ ಜೊತೆಗೆ ದೇವಾಲಯಕ್ಕೆ ಆಗಮಿಸಿದ ಭಕ್ತಾದಿಗಳಿಗೆ ಪ್ರಸಾದವಿನಿಯೋಗವನ್ನು ಏರ್ಪಡಿಸಲಾಗಿತ್ತು.

ಮೋದಿ ಆರೋಗ್ಯ ವೃದ್ಧಿಗೆ ವಿಶೇಷ ಪೂಜೆ

■ ಕಾಯಕಯೋಗಿ ಸುದ್ದಿ



ಮಂಡ್ಯ : ಜಿಲ್ಲಾ ಮಹಿಳಾ ಮೋರ್ಚಾ ವತಿಯಿಂದ ಪ್ರಧಾನಿ ನರೇಂದ್ರಮೋದಿಯವರ ಆಯುಸ್ಸು ಹಾಗೂ ಆರೋಗ್ಯ ವೃದ್ಧಿಗಾಗಿ ನಗರದ ಶಕ್ತಿ ದೇವತೆ ಶ್ರೀ ಕಾಳಿಕಾಂಬ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಮಂಗಳಾ ಮಾತನಾಡಿ, ಹೆಣ್ಣು ಎಂದರೆ ಶಕ್ತಿ, ಹೆಣ್ಣು ಎಂದರೆ ಪ್ರಕೃತಿ. ಆದರೆ, ಕಾಂಗ್ರೆಸ್ ಮುಖಂಡರಾದ ರಾಹುಲ್‌ಗಾಂಧಿಯವರು ಜಗತ್ತಿನ ಸೃಷ್ಟಿಗೆ ಕಾರಣರಾದ ಶಕ್ತಿ (ಹೆಣ್ಣು)ಯನ್ನು ಸಂಪೂರ್ಣ ನಾಶ ಮಾಡಬೇಕು ಎಂಬ ಹೇಳಿಕೆಯನ್ನು ನೀಡಿರುವುದು ಬಾಲಿಶತನದಿಂದ ಕೂಡಿದೆ ಎಂದು ಆರೋಪಿಸಿದರು.

ಈ ಚುನಾವಣೆ ಶಕ್ತಿಯ ಆರಾಧಕರೂ ಹಾಗೂ ಶಕ್ತಿಯನ್ನು ನಾಶ ಮಾಡುತ್ತೇವೆ ಎಂದು ಫಣ ತೊಟ್ಟಿರುವ ವ್ಯಕ್ತಿಗಳ ನಡುವೆ ನಡೆಯಿದೆ. ದೇಶದ ಸಮಸ್ತ ಮಹಿಳೆಯರೂ ಕೂಡ ಈ ಬಾರಿ ನರೇಂದ್ರಮೋದಿಯವರ ಕೈ ಬಲಪಡಿಸುತ್ತಾರೆ ಎಂಬ ಅಚಲವಾದ ನಂಬಿಕೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬೇಟಿ ಬಚಾವೋ, ಬೇಟಿ ಪಡಾವೋ, ಮಹಿಳಾ ಸಬಲೀಕರಣಕ್ಕಾಗಿ ಕೇಂದ್ರ ಸರ್ಕಾರ ಕೈಗೊಂಡ ಅನೇಕ ಕಾರ್ಯಕ್ರಮಗಳು, ಮಹಿಳಾ ಮೀಸಲಾತಿಗೆ ಬಿಜೆಪಿ ಸರ್ಕಾರ ಕೈಗೊಂಡ ದಿಟ್ಟ ಹೆಜ್ಜೆ, ತ್ರಿವಳಿ ತಲಾಖ್ ಎಲ್ಲವೂ ಕೂಡ ಸ್ತ್ರೀ ಕುಲದ ಒಳಿತಿಗಾಗಿ ನರೇಂದ್ರ ಮೋದಿ ಸರ್ಕಾರ ನೀಡಿದ ಅಮೂಲ್ಯ ಕೊಡುಗೆಯಾಗಿದೆ ಎಂದರು.

ಇವೆಲ್ಲವನ್ನೂ ಮನಗಂಡಿರುವ ಮಹಿಳೆಯರು ಈ ಬಾರಿ ದೇಶಾದ್ಯಂತ ನರೇಂದ್ರಮೋದಿ ಕೈ ಹಿಡಿಯುತ್ತಾರೆ ಎಂದು ವಿಶ್ವಾಸದಿಂದ ನುಡಿದರು. ಮುಖಂಡರಾದ ಸಿಂಧು, ಶಿಲ್ಪ, ವಿಜಯಕುಮಾರಿ, ಮಂಜುಳಾ,

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 23–03–2024

ಮೈಸೂರು

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ಮತದಾನ ಜಾಗೃತಿ ಜಾಥಾ ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ಮೈಸೂರು: ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ವತಿಯಿಂದ ವಾಕಥಾನ್ ಕಾರ್ಯಕ್ರಮವನ್ನು ಆಯೋಜಿಸಿದ್ದು, ಶ್ರೀ ಕೋಟೆ ಅಂಜನೇಯ ಸ್ವಾಮಿ ದೇವಸ್ಥಾನದ ಆವರಣದಿಂದ ಪ್ರಾರಂಭಿಸಿ ವೈದ್ಯರ ಭವನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಕಾಲ್ನಡಿಗೆ ಜಾಥಾ ಮೂಲಕ ಸಮಾಪ್ತಿಗೊಳಿಸಲಾಯಿತು.

ಜಾಥಾ ಕಾರ್ಯಕ್ರಮವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರಾದ ಡಾ. ಪುಷ್ಪಲತಾ.ಬಿ.ಎಸ್ ಅವರು ಉದ್ಘಾಟಿಸಿದರು. ಜಾಥಾ ನಂತರ ವೈದ್ಯರ ಭವನದಲ್ಲಿ "ಸ್ವೀಪ್" ಮತದಾನದ ಕುರಿತಂತೆ ಪ್ರಮಾಣ ವಚನ ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಉಪ ನಿರ್ದೇಶಕರಾದ ಡಾ. ವಸಂತ ಕುಮಾರ್, ಇ–ಆಸ್ಪತ್ರೆಯ ನೋಡೆಲ್ ಅಧಿಕಾರಿಗಳು, ವಿಭಾಗೀಯ ಜಂಟಿ ನಿರ್ದೇಶಕರ ಕಛೇರಿಯ ಉಪ ನಿರ್ದೇಶಕರಾದ ಡಾ. ಮಲ್ಲಿಕಾ, ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕರಾದ ಡಾ. ಅಮರನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಕುಮಾರಸ್ವಾಮಿ.ಪಿ.ಸಿ., ಕೆಜಿಎಂಓಯ ಅಧ್ಯಕ್ಷರಾದ ಡಾ.ಜಗದೀಶ್.ಸಿ.ಎಂ., ಹಾಗೂ ಎಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ವೈದ್ಯಾಧಿಕಾರಿಗಳು, ಜಿಲ್ಲಾ ಐಇಸಿ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿ ವರ್ಗದವರು ಹಾಜರಿದ್ದರು.



ಎಸ್ಎಸ್ಎಲ್‌ಸಿ ಪರೀಕ್ಷೆ–ನಿಷೇಧಿತ ಪ್ರದೇಶ ಘೋಷಣೆ

■ ಕಾಯಕಯೋಗಿ ಸುದ್ದಿ

ಮೈಸೂರು: ಮಾ.25 ರಿಂದ ಏ. 06 ರವರೆಗೆ ಜಿಲ್ಲೆಯಲ್ಲಿ ನಡೆಯಲಿರುವ (ಮೈಸೂರು ನಗರ ಹೊರತುಪಡಿಸಿ) ಎಸ್ಎಸ್ಎಲ್‌ಸಿ ಪರೀಕ್ಷೆ ನಡೆಸುವ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು "ನಿಷೇಧಿತ ಪ್ರದೇಶ" ಎಂದು ಘೋಷಿಸಿದ್ದು, ಪರೀಕ್ಷೆಗಳು ಪ್ರಾರಂಭವಾಗುವ ಅರ್ಧ ಗಂಟೆ ಮುಂಚಿತವಾಗಿ ಮತ್ತು ಪರೀಕ್ಷಾ ಅವಧಿ ಮುಗಿಯುವವರೆಗೆ ಪರೀಕ್ಷಾ ಕೇಂದ್ರಗಳ ಸಮೀಪದಲ್ಲಿರುವ ಎಲ್ಲಾ ಜೆರಾಕ್ಸ್ ಮತ್ತು ಸೈಬರ್ ಕೇಂದ್ರಗಳನ್ನು ಮುಚ್ಚುವಂತೆ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಕೆ.ವಿ. ರಾಜೇಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಸಭಾ ಚುನಾವಣೆ– ಅಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ

ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಅನುಸರಿಸಲು ಡಿಸಿ ಸೂಚನೆ

■ ಕಾಯಕಯೋಗಿ ಸುದ್ದಿ

ಮೈಸೂರು: ಲೋಕಸಭಾ ಚುನಾವಣೆ ಸಂಬಂಧಿಸಿದಂತೆ ಎಫ್ಎಸ್‌ಟಿ, ಎಸ್ಎಸ್‌ಟಿ, ವಿವಿಟಿ ಸೇರಿದಂತೆ ವಿವಿಧ ತಂಡಗಳಿಗೆ ಚುನಾವಣಾ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಚುನಾವಣಾ ಕರ್ತವ್ಯ ನಿರ್ವಹಿಸಬೇಕು ಹಾಗೂ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.

ಮೈಸೂರು– ಕೊಡಗು ಲೋಕಸಭಾ ಕ್ಷೇತ್ರದ ಚುನಾವಣೆ ಅಂಗವಾಗಿ ಎಫ್ಎಸ್‌ಟಿ, ಎಸ್ಎಸ್‌ಟಿ ಮತ್ತು ವಿವಿಟಿ ತಂಡದ ಮುಖ್ಯಸ್ಥರಿಗೆ ಮಾದರಿ ನೀತಿ ಸಂಹಿತೆ (ಎಂಸಿಸಿ) ಕುರಿತು ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ತರಬೇತಿಯಲ್ಲಿ ಅನೇಕ ಸಲಹೆ ಸೂಚನೆ ನೀಡಿದರು.

ಜಿಲ್ಲೆಯಾದ್ಯಂತ ಎಲ್ಲಾ ಚೆಕ್ ಪೋಸ್ಟ್‌ಗಳಲ್ಲಿ ಪ್ರತಿಯೊಂದು ವಾಹನಗಳನ್ನು ಪರಿಶೀಲಿಸಬೇಕು. ಪರಿಶೀಲನೆಯ ಸಂದರ್ಭದಲ್ಲಿ ಯಾವುದೇ ವಾಹನದಲ್ಲಿ 50 ಸಾವಿರಕ್ಕಿಂತ ಹೆಚ್ಚಿನ ಹಣ ಸಾಗಿಸುತ್ತಿರುವುದು ಕಂಡುಬಂದರೆ ಅಂತಹ ವಾಹನಗಳನ್ನು ವಶಪಡಿಸಿಕೊಳ್ಳಬೇಕು ಎಂದರು.

ಹಣವಲ್ಲದೆ ಪಕ್ಷ ಗುರುತಿರುವ ಟಿ–ಶರ್ಟ್, ಕ್ಯಾಪ್, ಹೆಚ್ಚಿನ ಸಂಖ್ಯೆಯ ಸೀರೆ, ಆಹಾರದ ಕಿಟ್ ಇತ್ಯಾದಿ ರೀತಿಯ ಆಕ್ಷೇಪ ಮತ್ತು ಗಳ ಸಾಗಾಣಿಕೆ ಕಂಡುಬಂದರೆ ಅವುಗಳನ್ನು ವಶಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಚುನಾವಣೆಯ ಸಂದರ್ಭವಾದ್ದರಿಂದ ನೀತಿ ಸಂಹಿತೆಯ ಉಲ್ಲಂಘನೆ ಪ್ರಕರಣಗಳು ಕಂಡು ಬಂದ ಸಂದರ್ಭದಲ್ಲಿ ಅಧಿಕಾರಿಗಳು ಜಾಗರೂಕರಾಗಿರಬೇಕು ಹಾಗೂ ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಅನುಸರಿಸಿ ಅಗತ್ಯ ಕ್ರಮ ವಹಿಸಬೇಕು ಎಂದರು.

ಸಂಶಯಾಸ್ಪದ ಪ್ರಕರಣಗಳು ಕಂಡು ಬಂದರೂ ಅವುಗಳನ್ನು ವಶಪಡಿಸಿಕೊಂಡು



ಸಂಬಂಧ ಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿ ಅವರಿಂದ ಸತ್ಯ –ಅಸತ್ಯತೆಯನ್ನು ತಿಳಿಯಬೇಕು ಎಂದು ಹೇಳಿದರು.

ಅಭ್ಯರ್ಥಿಗಳು ಅಧಿಕೃತವಾಗಿ ಘೋಷಣೆಯಾದ ನಂತರದಲ್ಲಿ ಅಧಿಕಾರಿಗಳ ಕೆಲಸ ಹೆಚ್ಚಾಗಲಿದ್ದು, ಆ ಸಮಯದಲ್ಲಿ ಬುದ್ಧಿವಂತಿಕೆ ಹಾಗೂ ನಿಗಾವಹಿಸಿ ಕೆಲಸ ಮಾಡಬೇಕು ಎಂದರು.

ತರಬೇತಿಯ ಉದ್ದೇಶವೇ ಅಧಿಕಾರಿಗಳಿಗೆ ಚುನಾವಣಾ ನೀತಿ ಸಂಹಿತೆಯ ಬಗ್ಗೆ ಹಾಗೂ ಅವರ ಪಾತ್ರ ಮತ್ತು ಜವಾಬ್ದಾರಿಯನ್ನು ತಿಳಿಸುವುದಾಗಿದೆ. ಅದನ್ನು ಅರಿತು ಅಧಿಕಾರಿಗಳು ನಿಯಮಗಳನ್ನು ಪಾಲಿಸಿ ಯಾವುದೇ ರೀತಿಯ ತೊಂದರೆಯಾಗದಂತೆ ಎಚ್ಚರ ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ.ಎಂ. ಗಾಯತ್ರಿ ಅವರು ಮಾತನಾಡಿ, ಅಧಿಕಾರಿಗಳು ಚುನಾವಣಾ ಕಾರ್ಯವನ್ನು ಯಾವುದೇ ಲೋಪವಾಗದಂತೆ ಅತ್ಯಂತ ಜಾಗರೂಕತೆಯಿಂದ ಕೆಲಸ ನಿರ್ವಹಿಸಬೇಕು. ಬೇಸಿಗೆ ಕಾಲವಾದ್ದರಿಂದ ಬಿಸಿಲು ಹೆಚ್ಚಾಗಿರುತ್ತದೆ ಈ ಸಂದರ್ಭದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ತಮ್ಮ ಆರೋಗ್ಯದ ಕಡೆಯು ಕಾಳಜಿ ವಹಿಸಬೇಕು ಎಂದರು.

ಚುನಾವಣೆಯು ಹತ್ತಿರವಾಗುತ್ತಿದ್ದು, ಜಿಲ್ಲಾ ವ್ಯಾಪ್ತಿಗೆ ಬರುವ ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಎಚ್ಚರಿಕೆಯಿಂದ ಕೆಲಸ ಮಾಡಿ, ಅಕ್ರಮ ವಸ್ತುಗಳು ಹಾಗೂ ಹಣ ಸಾಗಾಣಿಕೆಯಾಗದಂತೆ ಎಚ್ಚರವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ತರಬೇತಿಯಲ್ಲಿ ವಾಣಿಜ್ಯ ಇಲಾಖೆಯ ಜಂಟಿ ಆಯುಕ್ತರಾದ ಕಂಬಣ್ಣ. ಡಿ, ಎಕ್ಸೈಸ್ ಇಲಾಖೆಯ ಉಪ ಆಧೀಕ್ಷಕರಾದ ಮೋಹನ್, ಪೊಲೀಸ್ ಇಲಾಖೆಯ ಇನ್ಸ್‌ಪೆಕ್ಟರ್ ಆದ ಕಾಂತರಾಜು ಸೇರಿದಂತೆ ಇನ್ನಿತರ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಚುನಾವಣಾ ಆಯೋಗದ ನೀತಿ ನಿಯಮಗಳನ್ನು ಪಾಲನೆ ಮಾಡಿ

ವರುಣ ಕ್ಷೇತ್ರದ ಚುನಾವಣಾಧಿಕಾರಿ ಕಲ್ಪಶ್ರೀ ಮನವಿ

■ ಕಾಯಕಯೋಗಿ ಸುದ್ದಿ

ನಂಜನಗೂಡು: ನಂಜನಗೂಡು ನಗರದ ತಾಲ್ಲೂಕು ಆಡಳಿತ ಭವನದ ಸಭಾಂಗಣದಲ್ಲಿ ರಾಜಕೀಯ ಮುಖಂಡರು, ಪ್ರಿಂಟಿಂಗ್ ಪ್ರೆಸ್ ಮಾಲೀಕರು, ಬಾರ್ ಸೇರಿದಂತೆ ಕಲ್ಯಾಣ ಮಂಟಪಗಳ ಮಾಲೀಕರನ್ನು ಆಹ್ವಾನಿಸಿ ನಂಜನಗೂಡು ಮತ್ತು ವರುಣ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿಗಳು ಸಭೆ ನಡೆಸಿದ್ದಾರೆ.

ವರುಣ ವಿಧಾನಸಭಾ ಕ್ಷೇತ್ರದ ಚುನಾವಣಾ ಅಧಿಕಾರಿ ಸಿ.ಆರ್. ಕಲ್ಪಶ್ರೀ ಮಾತನಾಡಿ, ಜಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆಯನ್ನು ನಡೆಸಲಾಗುತ್ತಿದೆ. ಈಗಾಗಲೇ ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಕಡ್ಡಾಯವಾಗಿ ಚುನಾವಣಾ ಆಯೋಗದ ನೀತಿ ನಿಯಮಗಳನ್ನು ಪಾಲನೆ ಮಾಡಬೇಕು. ರಾಜಕೀಯ ಅಭ್ಯರ್ಥಿಯ ಪರವಾಗಿ ಯಾವುದೇ ರೀತಿಯ ಕಾರ್ಯಕ್ರಮಗಳನ್ನು ಮಾಡುವಂತಿಲ್ಲ. ಮಾಲೀಕರು ಮತದಾರರನ್ನು ಓಲೈಸುವ ಕೆಲಸಗಳನ್ನು ಮಾಡಬಾರದು. ಮಾದರಿ



ನೀತಿ ಸಂಹಿತೆ ಉಲ್ಲಂಘನೆ ಆಗದಂತೆ ಎಚ್ಚರ ವಹಿಸಬೇಕು. ಉಲ್ಲಂಘನೆಯಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ. ಪೆಟ್ರೋಲ್ ಬಂಕ್ ಮಾಲೀಕರು ಟೋಕನ್ ಮೂಲಕ ಪೆಟ್ರೋಲ್ ಹಾಕುವಂತಿಲ್ಲ. ಹಾಗೂ ಬೈಕ್ ಯಾ್ಲಿಗಳಿಗೆ ಪೆಟ್ರೋಲ್ ನೀಡುವಂತಿಲ್ಲ. ಮದುವೆ ಸಮಾರಂಭಗಳಿವೆ ಎಂದು ಸುಳ್ಳು ಹೇಳಿ ಮದುವೆಗಳನ್ನು ರಾಜಕೀಯ ಕಾರ್ಯಕ್ರಮಗಳನ್ನಾಗಿ ಮಾಡಿಕೊಳ್ಳುತ್ತಾರೆ ಈ ಬಗ್ಗೆ ಕಲ್ಯಾಣ ಮಂಟಪದ ಮಾಲೀಕರು ಎಚ್ಚರಿಕೆ ವಹಿಸಬೇಕು. ಬರ್ತಡೇ, ತೊಟ್ಟಿಲು ಶಾಸ್ತ್ರ, ಮದುವೆ, ದೇವರ ಕಾರ್ಯ ಸೇರಿದಂತೆ ಎಲ್ಲಾ ಕಾರ್ಯಕ್ರಮಗಳಿಗೂ ಅನುಮತಿ ಪಡೆಯಬೇಕು. ಏಪ್ರಿಲ್ 26 ರಂದು ಮತದಾನ ಮತ್ತು ಮತ ಎಣಿಕೆ ದಿನದ ಮುಂಚಿತವಾಗಿ ಮದ್ಯ ಮಾರಾಟವನ್ನು ನಿಷೇಧ ಮಾಡಲಾಗುತ್ತದೆ.

80 ವರ್ಷ ಮೇಲ್ಪಟ್ಟರಿಗೆ ಮನೆ ಮನೆ ಮತದಾನ ಇರುತ್ತೆ. ಚುನಾವಣೆಯಲ್ಲಿ ಅಕ್ರಮ ಕಂಡು ಬಂದರೆ ವಿಡಿಯೋ ಮತ್ತು ಫೋಟೋವನ್ನು ನಮಗೆ ಕಳುಹಿಸಿದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರಿಗಾಗಿ ಈಗಾಗಲೇ ನಂಜನಗೂಡಿನಲ್ಲಿ ಕಂಟ್ರೋಲ್ ರೂಮ್ ತೆರೆದಿದ್ದೇವೆ. ದೂರವಾಣಿ ಮೂಲಕವೂ ದೂರನ್ನು ಕೊಡಬಹುದು. ನಗರದ ಜೂನಿಯರ್ ಕಾಲೇಜಿನಲ್ಲಿ ಸ್ಟ್ರಾಂಗ್ ರೂಮ್ ತೆರೆಯಲಾಗಿದೆ. ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಒಬ್ಬ ವ್ಯಕ್ತಿ ಐವತ್ತು ಸಾವಿರಕ್ಕಿಂತ ಹೆಚ್ಚು ಹಣವನ್ನು ತೆಗೆದುಕೊಂಡು ಹೋಗುವಂತಿಲ್ಲ. ಫೇಸ್‌ಬುಕ್ ವಾಟ್ಸಾಪ್ ಸೇರಿದಂತೆ ಸಾಮಾಜಿಕ ಜಾಲತಾಣದಲ್ಲೂ ಅಭ್ಯರ್ಥಿಗಳ ಪರವಾಗಿ ಪ್ರಚಾರ ಮಾಡಿದ್ರೆ ಕ್ರಮ ಕೈಗೊಳ್ಳಲಾಗುವುದು. ಫೋನ್ ಪೇ ಮತ್ತು ಗೂಗಲ್ ಪೇ ಸೇರಿದಂತೆ ಇನ್ನಿತರ ಬ್ಯಾಂಕ್ ಗಳಲ್ಲಿ ಹಣವನ್ನು ವರ್ಗಾವಣೆ ಮಾಡಿದ್ರು ಅದಕ್ಕೆ ನಮ್ಮ ವಿಶೇಷ ತಂಡ ಗಮನ ಹರಿಸುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಂಜನಗೂಡು ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಜಗನ್ನಾಥ ಮೂರ್ತಿ, ಅಬಕಾರಿ ಇಲಾಖೆ ಅಧಿಕಾರಿ ಕೃಷ್ಣಮೂರ್ತಿ, ಚುನಾವಣಾ ಶಾಖೆಯ ಮಹದೇವಪ್ರಸಾದ್, ಹಾಗೂ ರಾಜಕೀಯ ಮುಖಂಡರು, ಹೋಟೆಲ್, ಕಲ್ಯಾಣ ಮಂಟಪ, ಪ್ರಿಂಟಿಂಗ್ ಪ್ರೆಸ್, ಬಾರ್ ಅಂಡ್ ರೆಸ್ಟೋರೆಂಟ್ ಮಾಲೀಕರು ಭಾಗವಹಿಸಿದ್ದರು.

ದ್ವಿತೀಯ ಪಿಯುಸಿ ಪರೀಕ್ಷೆ ಬರೆಯಲು ಹೋದ ವಿದ್ಯಾರ್ಥಿ ನಾಪತ್ತೆ

■ ಕಾಯಕಯೋಗಿ ಸುದ್ದಿ

ನಂಜನಗೂಡು: ದ್ವಿತೀಯ ಪಿಯುಸಿ ಪರೀಕ್ಷೆ ಬರೆಯಲು ಹೋದ ವಿದ್ಯಾರ್ಥಿ ನಾಪತ್ತೆಯಾಗಿರುವ ಘಟನೆ ನಂಜನಗೂಡು ತಾಲ್ಲೂಕಿನ ಅಳಗಂಚಿಪುರ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ಶೀಲಾ ಎಂಬುವವರ ಪುತ್ರ 18 ವರ್ಷದ ನಿತೀನ್ ನಂಜನಗೂಡಿನ ಜೂನಿಯರ್ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿದ್ದನು. ದಿನಾಂಕ ಮಾರ್ಚ್ 20 ರಂದು ನಂಜನಗೂಡು ನಗರದ ಜೂನಿಯರ್ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ಬರೆಯಲು ಹೋಗಿದ್ದಾರೆ. ಪರೀಕ್ಷೆಯನ್ನು ಬರೆದ ವಿದ್ಯಾರ್ಥಿ ಮನೆಗೆ ಬಾರದೆ ನಾಪತ್ತೆಯಾಗಿದ್ದಾರೆ. ಈ ಬಗ್ಗೆ ಸ್ನೇಹಿತರು ಹಾಗೂ ನೆಂಟರಿಷ್ಟರ ಮನೆಯಲ್ಲಿ ಕಳೆದ ಎರಡು ಮೂರು ದಿನಗಳಿಂದ ಹುಡುಕಿದರು ಇವರ ಸುಳಿವು ಪತ್ತೆಯಾಗಿಲ್ಲ ನನ್ನ ಮಗನನ್ನು ಹುಡುಕಿ ಕೊಡಿ ಎಂದು ಬಿಳಿಗೆರೆ ಪೊಲೀಸ್ ಠಾಣೆಯಲ್ಲಿ ವಿದ್ಯಾರ್ಥಿಯ ತಾಯಿ ಶೀಲಾ ದೂರು ನೀಡಿದ್ದಾರೆ.

ಚಹರೆ: ನಿತೀನ್ , 18 ವರ್ಷ ವಯಸ್ಸು, 5 ಅಡಿ ಎತ್ತರ, ಸಾಧಾರಣ ಶರೀರ, ಕೋಲು ಮುಖ, ಹೋಗುವಾಗ ಕಾಲೇಜಿನ ಸಮವಸ್ತ್ರವನ್ನು ಧರಿಸಿದ್ದಾರೆ. ಈ ವಿದ್ಯಾರ್ಥಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಬಿಳಿಗೆರೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 9480805051ಕ್ಕೆ ಕರೆ ಮಾಡುವಂತೆ ಪೊಲೀಸರು ಪ್ರಕಟಣೆಯನ್ನು ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯಯ

ಮೈಸೂರು:ಮಾ.24 ರಂದು ಬೆಳಿಗ್ಗೆ 10 ರಿಂದ ಸಂಜೆ 5:30 ಗಂಟೆಯವರೆಗೆ ದೊಡ್ಡಕೆರೆ ಮೈದಾನ ವಿದ್ಯುತ್ ವಿತರಣಾ ಕೇಂದ್ರದಲ್ಲಿ 4ನೇ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಹಾಗಾಗಿ ರಾಮಾನುಜ ರಸ್ತೆ 01 ರಿಂದ 09ನೇ ಕ್ರಾಸ್ ವರೆಗೆ, ಹೊಸಬಂಡಿಕೇರಿ, ಜೆ.ಎಸ್.ಎಸ್. ಆಸ್ಪತ್ರೆ, ಅಗ್ರಹಾರ, ಬಸವೇಶ್ವರ ರಸ್ತೆ, ಚಾಮುಂಡಿಪುರಂನ ಹಲವು ಭಾಗಗಳು, ತ್ಯಾಗರಾಜ ರಸ್ತೆ ಚಾಮುಂಡಿಬೆಟ್ಟ ಮತ್ತು ಪಾದ, ಗುಂಡೂರಾವ್ ನಗರ, ದತ್ತನಗರ, ಮುನೇಶ್ವರನಗರ, ಗೌರಿಶಂಕರನಗರ, ನಂಜನಗೂಡು ಟೋಲ್ ಗೇಟ್, ತಾವರೆಕೆರೆ, ಜಾಕಿ ಕ್ವಾರ್ಟರ್ಸ್ ರೇಸ್ ಕೋರ್ಸ್ ಹಿಂಭಾಗ, ಸರ್ಪ್ ಬಸ್ ನಿಲ್ದಾಣ, ನಜರಬಾದ್, ಇಟ್ಟಿಗೆಗೂಡು, ಮೈಲಾಲಯದ ಸುತ್ತ-ಮುತ್ತ ಸರ್ಕಾರಿ ಆಫೀಸ್ ಗೃಹ ಮತ್ತು ಸುತ್ತ-ಮುತ್ತಲಿನ ಪ್ರದೇಶಗಳು, ತಾಲ್ಲೂಕು ಕಛೇರಿ, ಡಿ. ದೇವರಾಜ ಅರಸು ರಸ್ತೆ ಬಿ.ಎನ್. ರಸ್ತೆ ಚಾಮುಂಡಿಬೆಟ್ಟ ಸಿದ್ಧಾರ್ಥನಗರ, ಕುರುಬಾರಳ್ಳಿ ಜೆಸಿ. ನಗರ, ಕೆಸಿ ನಗರ, ಜೆ.ಎಸ್.ಎಸ್ ಆಯುರ್ವೇದಿಕ್ ಸುತ್ತ-ಮುತ್ತ ಅರಮನೆ ಸುತ್ತ-ಮುತ್ತಲಿನ ಪ್ರದೇಶಗಳು, ಶ್ರೀ ಹರ್ಷ ರಸ್ತೆ ಸಯ್ಯಾಜೀರಾವ್ ರಸ್ತೆ ಇಡ್ಡಿನ ರಸ್ತೆ ಸುತ್ತ-ಮುತ್ತಲಿನ ಪ್ರದೇಶಗಳು.

ವಿಜೃಂಭಣೆಯ ಶ್ರೀ ನಂಜುಂಡೇಶ್ವರನ ಗೌತಮ ಪಂಚ ಮಹಾ ರಥೋತ್ಸವ

■ ಕಾಯಕಯೋಗಿ ಸುದ್ದಿ

ನಂಜನಗೂಡು: ದಕ್ಷಿಣ ಕಾಶಿ ನಂಜನಗೂಡಿನಲ್ಲಿ ದೊಡ್ಡ ಜಾತ್ರಾ ಮಹೋತ್ಸವದಲ್ಲಿ ಶ್ರೀ ನಂಜುಂಡೇಶ್ವರನ ಸನ್ನಿಧಿಯಲ್ಲಿ ಗೌತಮ ಪಂಚ ಮಹಾ ರಥೋತ್ಸವ ವಿಜೃಂಭಣೆ ಯಿಂದ ಶುಕ್ರವಾರ ಬೆಳಿಗ್ಗೆ 6:30 ರ ಸಮಯದಲ್ಲಿ ಸಮಯದಲ್ಲಿ ಜರುಗಿದೆ.

ಶ್ರೀ ಗೌತಮ ಪಂಚ ಮಹಾ ರಥೋತ್ಸವದಲ್ಲಿ ಶ್ರೀ ನಂಜುಂಡೇಶ್ವರಸ್ವಾಮಿಯ ಉತ್ಸವ ಮೂರ್ತಿಯನ್ನು ಕುಳ್ಳಿರಿಸಿ ದೇವಾಲಯದ ಪ್ರಧಾನ ಆಗಮಿಕ ನಾಗಚಂದ್ರ ದೀಕ್ಷಿತ್ ನೇತೃತ್ವದಲ್ಲಿ ಪೂಜೆ ಪುನಸ್ಕಾರಗಳನ್ನು ಮಾಡಲಾಯಿತು.



ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಿಲ್ಲಾ, ತಾಲ್ಲೂಕು ಆಡಳಿತ ನೇತೃತ್ವದಲ್ಲಿ ಬೆಳಿಗ್ಗೆ 6.30 ರಿಂದ 6.50ರೊಳಗೆ ಸಲ್ಲುವ ಶುಭ ಮೀನ ಲಗ್ನದಲ್ಲಿ ನಡೆದ ಗೌತಮ ಪಂಚಮಹಾ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ರಥ ಬೀದಿಯಲ್ಲಿ ಶ್ರೀ ಗಣಪತಿ, ಶ್ರೀ ನಂಜುಂಡೇಶ್ವರಸ್ವಾಮಿ, ಪಾರ್ವತಿ ಅಮ್ಮನವರು, ಸುಬ್ರಹ್ಮಣ್ಯ ಹಾಗೂ ಚಿಂಡಿಕೇಶ್ವರ ಸ್ವಾಮಿಯ ರಥಗಳು ಸಾಗಿವೆ.

ನೂರಾರು ಟನ್ ತೂಕದ ಬೃಹತ್ ರಥ ವನ್ನು ಲಕ್ಷಾಂತರ ಭಕ್ತರ ಎಳೆದು ಪುನೀತರಾಗಿದ್ದಾರೆ.

ರಾಜ್ಯದ ಮೂಲೆಗಳಿಂದ ಆಗಮಿಸಿದ ಲಕ್ಷಾಂತರ ಭಕ್ತರು 5 ರಥೋತ್ಸವವನ್ನು ಕಣ್ತುಂಬಿಕೊಂಡಿದ್ದಾರೆ. ಬೆಳಿಗ್ಗೆ ಎಂಟು ಗಂಟೆಯ ಸಮಯಕ್ಕೆ ರಥೋತ್ಸವಗಳು ಸ್ವಾಸ್ಥಾನವನ್ನು ತಲುಪಿದೆ.

ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿತ್ತು. ಹೆಚ್ಚುವರಿ ಸಿಸಿ ಕ್ಯಾಮೆರಾ ಗಳನ್ನು ಅಳವಡಿಸಲಾಗಿತ್ತು.

ಈ ಸಂದರ್ಭದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್, ತಹಶೀಲ್ದಾರ್ ಶಿವಕುಮಾರ್ ಕಾಸ್ಕೂರು, ದೇವಾಲಯ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–4
23–03–2024
ತುಮಕೂರು–ಚಾಮರಾಜನಗರ

ಲೋಕಸಭಾ ಚುನಾವಣೆ : ಪೂರ್ವ ತಯಾರಿ ಅಗತ್ಯ

■ ಕಾಯಕಯೋಗಿ ಸುದ್ದಿ

ತುಮಕೂರು: ಮುಕ್ತ, ನ್ಯಾಯಸಮ್ಮತ, ಪಾರದರ್ಶಕ ಚುನಾವಣೆಗಾಗಿ ಪೂರ್ವ ತಯಾರಿ ಅಗತ್ಯ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶುಭ ಕಲ್ಯಾಣ್ ಸೆಕ್ಟರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿಂದು ಸೆಕ್ಟರ್ ಅಧಿಕಾರಿಗಳ ಕರ್ತವ್ಯ ಹಾಗೂ ವಿದ್ಯುನ್ಮಾನ ಮತ ಯಂತ್ರ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರತಿ ಸೆಕ್ಟರ್ ಅಧಿಕಾರಿಗಳು 10 ರಿಂದ 12 ಮತಗಟ್ಟೆಗಳ ಜವಾಬ್ದಾರಿಯನ್ನು ಹೊಂದಿದ್ದು, ರಾಜ್ಯ ಮತ್ತು ಕೇಂದ್ರ ಸರ್ಕಾರದ ಕೆಲವು ಇಲಾಖೆಗಳ ಅಧಿಕಾರಿಗಳನ್ನು ಸೆಕ್ಟರ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ. ನೇಮಕವಾದ ಸೆಕ್ಟರ್ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಮತಗಟ್ಟೆಗಳ ಉಸ್ತುವಾರಿ, ಭೀತಿ–ತಡೆ ನಕಾಶೆ ತಯಾರಿ, ಚುನಾವಣಾ ನಿರ್ವಹಣೆ, ಜಿಲ್ಲಾಧಿಕಾರಿಗಳಿಗೆ ಕಾಲಕಾಲಕ್ಕೆ ವರದಿ ಮಾಡುವುದು ಸೇರಿದಂತೆ ಮತಗಟ್ಟೆಗಳು, ಮತಗಟ್ಟೆ ಅಧಿಕಾರಿಗಳು, ಮಾರ್ಗಾಧಿಕಾರಿಗಳು, ಬಿಎಲ್ಓ, ಚುನಾವಣಾ ನೋಂದಣಿ ಅಧಿಕಾರಿಗಳು(ಇಆರ್ಓ) ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ನಡುವೆ ಸಮನ್ವಯತೆ ಸಾಧಿಸಬೇಕು ಎಂದು ತಿಳಿಸಿದರು.

ಸೆಕ್ಟರ್ ಅಧಿಕಾರಿಗಳು ಈ ಹಿಂದೆ ಹಲವಾರು ಚುನಾವಣೆಗಳಲ್ಲಿ ಕರ್ತವ್ಯ ನಿರ್ವಹಿಸಿದ್ದೂ ಒಂದು ಚುನಾವಣೆಗಿಂತ ಮತ್ತೊಂದು ಚುನಾವಣೆಯು ಭಿನ್ನವಾಗಿರುತ್ತದೆ ಎಂಬುದನ್ನು ತಿಳಿಯಬೇಕು. ಚುನಾವಣೆ ಯಶಸ್ವಿಯಾಗಬೇಕಾದರೆ ಸೆಕ್ಟರ್ ಅಧಿಕಾರಿಗಳ ಪಾತ್ರ ಪ್ರಮುಖವಾದುದು. ಸೆಕ್ಟರ್ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಮತಗಟ್ಟೆಗಳು ಎಲ್ಲೆಲ್ಲಿ ಇವೆ ಹಾಗೂ ಯಾವ ಮಾರ್ಗದಿಂದ ಮತಗಟ್ಟೆಗೆ ಕ್ಷಿಪ್ರವಾಗಿ ಸಂಚರಿಸಬಹುದು ಎಂಬುದನ್ನು ಗುರುತಿಸಬೇಕು. ಮತಗಟ್ಟೆಗಳಲ್ಲಿ ಮೂಲಭೂತ ಸೌಕರ್ಯವಿರುವುದನ್ನು ಗಮನಿಸಿ ವರದಿ ಮಾಡಬೇಕು. ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾದರೆ ಕೂಡಲೇ ಚುನಾವಣಾಧಿಕಾರಿಗಳಿಗೆ ವರದಿ ಮಾಡಬೇಕು ಎಂದರು. ಸೆಕ್ಟರ್ ಅಧಿಕಾರಿಗಳು ತಮಗೆ ಹಂಚಿಕೆಯಾಗಿರುವ ಮತಗಟ್ಟೆ ವ್ಯಾಪ್ತಿಯಲ್ಲಿ ಮತದಾರರಿಗೆ ಮತದಾನದ ಬಗ್ಗೆ ಜಾಗೃತಿ ಮೂಡಿಸಬೇಕು ಹಾಗೂ ಮತ ಯಂತ್ರದ ಕಾರ್ಯ ವಿಧಾನದ ಬಗ್ಗೆ ಮಾಹಿತಿ ನೀಡಬೇಕು.

ಮೋದಿ ಮೂರನೇ ಬಾರಿ ಪ್ರಧಾನಮಂತ್ರಿಯಾಗಿ ಆಯ್ಕೆಯಾಗಲಿದ್ದಾರೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಕಳೆದ ಹತ್ತು ವರ್ಷಗಳಿಂದ ಭ್ರಷ್ಟಾಚಾರ ರಹಿತ ಆಡಳಿತ ನಡೆಸಿರುವ ನರೇಂದ್ರ ಮೋದಿ ರವರು ಮೂರನೇ ಬಾರಿಯೂ ಪ್ರಧಾನಮಂತ್ರಿಗಳಾಗಿ ಆಯ್ಕೆಯಾಗಲಿದ್ದಾರೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ತಿಳಿಸಿದರು.

ಹನೂರು ಪಟ್ಟಣದ ಗೌರಿಶಂಕರ ಕಲ್ಯಾಣ ಮಂಟಪದಲ್ಲಿ ಕರೆಯಲಾಗಿದ್ದ ಲೋಕಸಭಾ ಚುನಾವಣಾ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದರು.

ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿ ರವರು ಬಡವರು, ಮಹಿಳೆಯರು ರೈತರು ಸೇರಿದಂತೆ ಎಲ್ಲಾ ವರ್ಗದವರಿಗೆ ಸುಮಾರು 180 ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದಾರೆ. ಈ ಕಾರ್ಯಕ್ರಮಗಳಿಗೆ 30 ಲಕ್ಷ ಕೋಟಿ ಹಣ ಅನುದಾನ ನೀಡಿದ್ದಾರೆ. ಕಳೆದ ಸರ್ಕಾರಗಳ ಅವಧಿಯಲ್ಲಿ ಕೇಂದ್ರ ಸರ್ಕಾರ ಫಲಾನುಭವಿಗೆ ರೂ.100 ನೀಡಿದರೆ ಫಲಾನುಭವಿಗೆ ತಲುಪುವವರೆಗೆ 10 ರೂಪಾಯಿ ತಲುಪುತ್ತಿತ್ತು. ಆದರೆ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಪ್ರತಿಯೊಬ್ಬ ಫಲಾನುಭವಿಗೂ ಕೇಂದ್ರ ಸರ್ಕಾರದ ಹಣ ನೇರವಾಗಿ ಖಾತೆಗೆ ಜಮೆಯಾಗುತ್ತಿದೆ ಎಂದರು.

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗದಕ್ಕೆ ಮೀಸಲಾಗಿದ್ದ ಅನುದಾನವನ್ನು ಗ್ಯಾರಂಟಿ ಗಳಿಗೆ ಬಳಕೆ ಮಾಡಿಕೊಳ್ಳುತ್ತಿದ್ದಾರೆ, ಇದೊಂದು ಭ್ರಷ್ಟ ಸರ್ಕಾರ ಎಂದು ವ್ಯಾಖ್ಯಾನ ನಡೆಸಿದರು.

ಬಿಜೆಪಿ ಅಭ್ಯರ್ಥಿ ಬಾಲರಾಜು ಮಾತನಾಡಿ ನರೇಂದ್ರ ಮೋದಿ ಅವರು ದೇಶಕ್ಕೆ ಅನಿವಾರ್ಯ ಕಳೆದ ಹತ್ತು ವರ್ಷಗಳಿಂದ ಎಲ್ಲಾ ವರ್ಗದವರನ್ನು ಒಗ್ಗೂಡಿಸಿ ಆಡಳಿತ ನಡೆಸಿದ್ದಾರೆ. ಈ ಬಾರಿಯೂ ಇಡೀ ದೇಶಾದ್ಯಂತ ನರೇಂದ್ರ ಮೋದಿ ರವರು ಮೂರನೇ ಬಾರಿಗೆ ಪ್ರಧಾನಿ ಆಗಬೇಕೆಂಬ ದೇಶದ ಜನತೆ ಕಾತರರಾಗಿದ್ದಾರೆ. ಕಳೆದ 10 ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಜೀತ ಮಾಡಿದ್ದೆ ಆದರೆ ನನಗೆ ಕಾಂಗ್ರೆಸ್ ಪಕ್ಷ ಅನ್ಯಾಯ ಮಾಡಿದೆ, ಬಿಜೆಪಿಯು ಹಿರಿಯ ನಾಯಕರಾದ ಯಡಿಯೂರಪ್ಪ ಅವರು ನನಗೆ ಆಶೀರ್ವಾದ ಮಾಡಿದ್ದಾರೆ. ಬಿಜೆಪಿ ಕಾರ್ಯಕರ್ತರು ಯೋಧರಿದ್ದಂತೆ, ಹನೂರು ಕ್ಷೇತ್ರದ ಜನತೆ ನನ್ನನ್ನು ಬೆಂಬಲಿಸಿ ನಿಮ್ಮ ಅಮೂಲ್ಯವಾದ ಮತವನ್ನು ನೀಡಿ ಎಂದು ಮನವಿ ಮಾಡಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಜನದ್ವನಿ ಬಿ ವೆಂಕಟೇಶ್ ಮಾತನಾಡಿ ಬಾಲರಾಜುರವರು ರಾಜಕೀಯದ ಮೂಲಕ ಸತತ ಜನಸೇವೆ ಮಾಡಿಕೊಂಡು ಬಂದಿರುವ ಅಪರೂಪದ ನಾಯಕ, ಕಳೆದ ಬಾರಿಯಂತೆ ಈ ಬಾರಿ ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಬಾಲರಾಜುರವರು ಗೆದ್ದೇ ಗೆಲ್ಲುತ್ತಾರೆ, ಕಾರ್ಯಕರ್ತರು ಬೂತ್ ಮಟ್ಟದಿಂದ ಹೆಚ್ಚಿನ ಮತವನ್ನು ನಮ್ಮ ಪಕ್ಷದ ಅಭ್ಯರ್ಥಿಗೆ ಕೊಡಿಸಲು ಹಗಲಿರುವೆ ಶ್ರಮಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ನಿರಂಜನ್ ಕುಮಾರ್, ಚುನಾವಣಾ ಉಸ್ತುವಾರಿ ಧಣೇಶ್, ಜಿಲ್ಲಾ ಸಂಚಾಲಕ ಮಲ್ಲಿಕಾರ್ಜುನಪ್ಪ ರಾಷ್ಟ್ರೀಯ ಪರಿಷತ್ ಸದಸ್ಯ ಬೂದಿಪಾಳು ವೆಂಕಟಸ್ವಾಮಿ, ಡಾ. ಎಸ್ ಡಿತ್ಯೇಶ್ ಕುಮಾರ್, ಮುಖಂಡರುಗಳಾದ ನಿಶಾಂತ್ ಡಾ.ಪ್ರೀತನ್ ನಾಗಪ್ಪ ಹನೂರು ಮಂಡಲ ಅಧ್ಯಕ್ಷರಾದ ವ್ರಜೇಂದ್ರ, ಮಲೆ ಮಹದೇಶ್ವರ ಮಂಡಲದ ಅಧ್ಯಕ್ಷ ಚಿಂಗವಾಡಿ ರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೆಂಕಟೇಗೌಡ ಸೇರಿದಂತೆ ಇನ್ನಿತರರು ಹಾಜರಿದ್ದರು.

ಫ್ಲೆಕ್ಸ್ ನಲ್ಲಿ ಮಾತ್ರ ಜೆಡಿಎಸ್ ಮುಖಂಡರ ಭಾವಚಿತ್ರ ಸಭೆಗೆ ಗೈರು

ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಜೆಡಿಎಸ್ ಶಾಸಕ ಹಾಗೂ ಮುಖಂಡರು ಗೈರು ಹಾಜರಾಗಿದ್ದರು. ಇದು ಸ್ಥಳೀಯ ಶಾಸಕ ಎಂ ಆರ್ ಮಂಜುನಾಥ್ ರವರು ಕಾಂಗ್ರೆಸ್ ಪಕ್ಷಕ್ಕೆ ಸೇರುತ್ತಾರೆಯೇ ಎಂಬ ಅನುಮಾನ ಕಾಡುತ್ತಿದೆ. ಕಳೆದ ವಾರ ಚಾಮರಾಜನಗರದ ಜಿಲ್ಲಾ ಕೇಂದ್ರದಲ್ಲಿ ನಡೆದ ಗ್ಯಾರಂಟಿ ಸಮಾವೇಶದಲ್ಲಿ ಸಮಾಜ ಕಲ್ಯಾಣ ಸಚಿವ ಎಸ್ ಸಿ ಮಹದೇವಪ್ಪ ರವರು ಹನೂರು ಜೆಡಿಎಸ್ ಶಾಸಕ ಎಂಆರ್ ಮಂಜುನಾಥ್ ರವರು ಮುಂದಿನ ದಿನಗಳಲ್ಲಿ ನಮ್ಮ ಜೊತೆ ಕೈಜೋಡಿಸಲಿದ್ದಾರೆ ಎಂಬುದಾಗಿ ತಿಳಿಸಿದ್ದರು. ಹನೂರಿನಲ್ಲಿ ಶುಕ್ರವಾರ ನಡೆದ ಬಿಜೆಪಿ ಕಾರ್ಯಕರ್ತರ ಸಭೆಗೆ ಶಾಸಕ ಎಂಆರ್ ಮಂಜುನಾಥ್ ರವರು ಗೈರು ಹಾಜರಾಗಿರುವುದು ಸಚಿವರ ಮಾತಿಗೆ ಪುಷ್ಟಿ ನೀಡಿದಂತಾಗಿದೆ.

ಎಚ್ ಡಿ ಕುಮಾರಸ್ವಾಮಿ ರವರು ಚೇತರಿಸಿಕೊಂಡ ನಂತರ ಸಮನ್ವಯ ಸಮಿತಿ ಸಭೆ ನಡೆಸಿ, ನಂತರ ಬಿಜೆಪಿ ಮತ್ತು ಜೆಡಿಎಸ್ ಎರಡು ಪಕ್ಷಗಳ ಕಾರ್ಯಕರ್ತರ ಸಭೆ ನಡೆಸಲಾಗುತ್ತದೆ. ಇದು ಬಿಜೆಪಿ ಕಾರ್ಯಕರ್ತರ ಸಭೆ ಹಾಗಾಗಿ ಅವರಿಗೆ ಆಹ್ವಾನ ನೀಡಿಲ್ಲ.
–ಎಸ್ ಬಾಲರಾಜು ,
ಮೈತ್ರಿ ಪಕ್ಷದ ಅಭ್ಯರ್ಥಿ



ಸುವಿಧ ಆಪ್ ಮೂಲಕ ಅರ್ಜೀ ಸಲ್ಲಿಸಿದರೆ 48 ಗಂಟೆಯೊಳಗೆ ಅನುಮತಿ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ವಿವಿಧ ಪಕ್ಷದ ಅಭ್ಯರ್ಥಿಗಳು ಹಾಗೂ ಮುಖಂಡರುಗಳು ಸಭೆ ಸಮಾರಂಭಗಳಿಗೆ ಸುವಿಧ ಆಪ್ ಮೂಲಕ ಅರ್ಜಿ ಸಲ್ಲಿಸಿದರೆ 48 ಗಂಟೆಯ ಒಳಗೆ ಅನುಮತಿ ಸಿಗಲಿದೆ ಎಂದು ಸಹಾಯಕ ಚುನಾವಣಾಧಿಕಾರಿ ಮಲ್ಲಿಕಾರ್ಜುನ್ ತಿಳಿಸಿದರು.

ಚಾಮರಾಜನಗರ ಮೀಸಲು ಲೋಕಸಭಾ ಚುನಾವಣೆ ಸಂಬಂಧ ಹನೂರು ಪಟ್ಟಣದ ಪಶು ವೈದ್ಯಕೀಯ ಆಸ್ಪತ್ರೆ ಆವರಣದಲ್ಲಿ ತೆರೆಯಲಾಗಿರುವ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ಕರೆದು ಅವರು ಮಾತನಾಡಿದರು.

ಕಳೆದ ವಿಧಾನಸಭಾ ಚುನಾವಣೆಯಿಂದ ಚುನಾವಣಾ ಆಯೋಗ ರಾಜಕೀಯ ಪಕ್ಷದವರಿಗೆ ಅಲೆದಾಟ ತಪ್ಪಿಸಲು ಸುವಿಧ ಆಪ್ ಮೂಲಕ ಪಕ್ಷದ ಕಾರ್ಯಕ್ರಮಗಳಿಗೆ ಅನುಮತಿ ಪಡೆಯಲು ಅನುಕೂಲ ಕಲ್ಪಿಸಿಕೊಟ್ಟಿದೆ. ಈ ನಿಟ್ಟಿನಲ್ಲಿ ರಾಜಕೀಯ ಪಕ್ಷದ ಅಭ್ಯರ್ಥಿಗಳು ಹಾಗೂ ಮುಖಂಡರುಗಳು ತಮ್ಮ ಮೊಬೈಲ್ ಬಳಕೆ ಮಾಡಿಕೊಂಡು ಗೂಗಲ್ ನಲಿ suvidha.eci.gov.in ಆಪ್ ನಲ್ಲಿ ತಮ್ಮ ಮೊಬೈಲ್ ನಂಬರ್ ನಮೂದಿಸಿದರೆ ಸಂಪೂರ್ಣ ಮಾಹಿತಿ ಸಿಗಲಿದೆ. ಆದ್ದರಿಂದ ರಾಜಕೀಯ ಮುಖಂಡರುಗಳು ಚುನಾವಣಾ ಆಯೋಗ ಜಾರಿಗೆ ತಂದಿರುವ ಈ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು.



ತಹಸಿಲ್ದಾರ್ ಗುರುಪ್ರಸಾದ್ ಮಾತನಾಡಿ ಲೋಕಸಭಾ ಚುನಾವಣೆಯಲ್ಲಿ ಅಕ್ರಮ ತಡೆಗಟ್ಟಲು ಚುನಾವಣಾ ಆಯೋಗ ಭಿತ್ತಿಪತ್ರ ಎಂಬ ಪಬ್ಲಿಕ್ ಆಪ್ ಬಿಡುಗಡೆ ಮಾಡಿದ್ದು ಸಾರ್ವಜನಿಕರು ಈ ಆಪ್ ಅನ್ನು ಡೌನ್ಲೋಡ್ ಮಾಡಿಕೊಂಡು ತಮ್ಮ ವ್ಯಾಪ್ತಿಯಲ್ಲಿ ಮತದಾರರಿಗೆ ಆಮಿಷ ಒಡ್ಡುವುದು, ಅಕ್ರಮ ಹಣ ಸಾಗಾಟ, ಪೋಸ್ಟರ್ ಅಂಟಿಸುವುದು ಸೇರಿದಂತೆ ಇನ್ನಿತರ ಕಾನೂನು ಬಾಹಿರ ಚಟುವಟಿಕೆಗಳು ನಡೆಯುತ್ತಿದ್ದರೆ ಈ ಆಪ್ ಮೂಲಕ ದೂರು ಸಲ್ಲಿಸಿದರೆ ನೇರವಾಗಿ ಜಿಲ್ಲಾ ಚುನಾವಣಾ ಅಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಸಂಬಂಧಪಟ್ಟ ಚುನಾವಣಾ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ಕ್ರಮ ಕೈಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಉಪತಹಸಿಲ್ದಾರ್ ರಂಜಿತ್ ಹಾಜರಿದ್ದರು.

ಪ್ರಜಾಪ್ರಭುತ್ವ ಬಲವರ್ಧನೆಗೆ ಮತ ಚಲಾಯಿಸಿ : ಉಮೇಶ್



■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಭಾರತವು ವಿಶ್ವದ ಅತೀ ದೊಡ್ಡದಾದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿದ್ದು, ಈ ಪ್ರಜಾಪ್ರಭುತ್ವದ ಜೀವಾಳವೇ ಮತದಾನವಾಗಿದೆ. ಎಲ್ಲರೂ ತಪ್ಪದೇ ಮತ ಚಲಾಯಿಸಿ ಮತ್ತು ಮತದಾನ ಮಾಡಲು ಪ್ರೇರೇಪಿಸಿ ಎಂದು ಹನೂರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರ ಉಮೇಶ್ ಅವರು ತಿಳಿಸಿದರು.

ಹನೂರು ತಾಲೂಕಿನಲ್ಲಿ ತಾಲೂಕು ಪಂಚಾಯಿತಿ ಮತ್ತು ತಾಲೂಕು ಸ್ವೀಪ್ ಸಮಿತಿ ವತಿಯಿಂದ 2024ರ ಲೋಕಸಭಾ ಚುನಾವಣೆಯ ಅಂಗವಾಗಿ ಚುನಾವಣಾ ಪರ್ವ ದೇಶದ ಗರ್ವ ಎಂಬ ಘೋಷವಾಕ್ಯದೊಂದಿಗೆ ಮಲೆ ಮಹದೇಶ್ವರ ಬೆಟ್ಟದ ಮುಖ್ಯ ರಸ್ತೆಯಿಂದ ತಾಳಬೆಟ್ಟದ ಶ್ರಮದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿವರಾತ್ರಿ ಜಾತ್ರೆಯಲ್ಲಿ ಹೆಚ್ಚು ಭಕ್ತರ ಭೇಟಿಯಿಂದಾಗಿ, ಪಾದಯಾತ್ರೆಯ ಸಂದರ್ಭದಲ್ಲಿ ಸುಮಾರು 25 ಕಿ.ಮೀ ವರೆಗೂ ಪ್ಲಾಸ್ಟಿಕ್, ಇತರೆ ತ್ಯಾಜ್ಯಗಳು ಹೆಚ್ಚು ಇವೆ. ಕಸವನ್ನು ವಿಂಗಡಣೆ ಮಾಡುವುದರ ಜೊತೆಗೆ ಸಾರ್ವಜನಿಕರಲ್ಲಿ ಮತಜಾಗೃತಿಯನ್ನು ಸಹ ಮೂಡಿಸಬೇಕು ಎಂದರು.

ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ ಮತದಾನದಿಂದ ಯಾರು ದೂರ ಉಳಿಯಬೇಡಿ. ಯಾರು ಸಹ ಆಮಿಷಗಳಿಗೆ ಒಳಗಾಗಬಾರದು. ದೇಶ ಅಭಿವೃದ್ಧಿ ಪಥದತ್ತ ಸಾಗಲು ನಿಮ್ಮ ಹಕ್ಕು ಚಲಾಯಿಸಬೇಕು ಎಂದು ಉಮೇಶ್ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರಾದ ರವೀಂದ್ರ ಅವರು ಮತದಾನ ಕುರಿತ ಪ್ರತಿಜ್ಞಾ ವಿಧಿ ಬೋಧಿಸಿದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಗೋವಿಂದಪ್ಪ, ಶಿವಣ್ಣ, ಸುರೇಶ, ರಾಮು, ಮಾದೇಶ ನಂದೀಶ, ಪುಷ್ಪಲತಾ, ಸಿದ್ದಪ್ಪ, ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.

ಪ್ರತಿಯೊಬ್ಬರು ಕಡ್ಡಾಯವಾಗಿ ಮತ ಚಲಾಯಿಸಿ: ಶ್ರೀಧರ್

■ ಕಾಯಕಯೋಗಿ ಸುದ್ದಿ

ಹನೂರು: ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬರು ಕಡ್ಡಾಯವಾಗಿ ತಮ್ಮ ಹಕ್ಕನ್ನು ತಪ್ಪದೆ ಚಲಾಯಿಸಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಶ್ರೀಧರ್ ಕರೆ ನೀಡಿದರು.

ಹನೂರು ಪಟ್ಟಣ ಪಂಚಾಯಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಅವರು ಚಾಲನೆ ನೀಡಿ ಅವರು ಮಾತನಾಡಿದರು.

ದೇಶದ ಪ್ರತಿಯೊಬ್ಬ ಪ್ರಜೆಯೂ ಮತದಾನ ಮಾಡುವ ಮೂಲಕ ತಮ್ಮ ಹಕ್ಕನ್ನು ಚಲಾಯಿಸಬೇಕು. ರಾಜಕೀಯ ಪಕ್ಷದ ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೆ ನನ್ನ ಮತ ನನ್ನ ಹಕ್ಕು ಎಂದು ಉತ್ತಮ ಜನಪ್ರತಿನಿಧಿಯನ್ನು ಆಯ್ಕೆ ಮಾಡಲು 18 ವರ್ಷ ತುಂಬಿದ ಪ್ರತಿಯೊಬ್ಬರು ಮತದಾನದಲ್ಲಿ ಭಾಗವಹಿಸಬೇಕು. ಮತದಾನದ ದಿನವನ್ನು ಹಬ್ಬದ ರೀತಿ ಆಚರಿಸಬೇಕು ಎಂದು ತಿಳಿಸಿದರು.

ನಮ್ಮ ದೇಶದಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡುತ್ತಿಲ್ಲ, ಶೇಕಡವಾರು ಮತದಾನದಲ್ಲಿ ನಾವು ಇನ್ನೂ ಹಿಂದೆ ಬಿದ್ದಿದ್ದೇವೆ, ಪ್ರಜ್ಞಾವಂತ ಮತದಾರರು ಹೆಚ್ಚಾಗಿ ಮತದಾನ ಮಾಡುತ್ತಿಲ್ಲ, ಐದು ವರ್ಷಗಳಿಗೊಮ್ಮೆ ನಡೆಯುವ ಮಹತ್ವದ ಚುನಾವಣೆಯ ಬಗ್ಗೆ ಪ್ರತಿಯೊಬ್ಬರು ಅರಿತುಕೊಳ್ಳಬೇಕು ಎಂದರು.

ಹನೂರು ಪಟ್ಟಣ ಪಂಚಾಯಿತಿಯಿಂದ ಹೊರಟ ಜಾಗೃತಿ ಜಾಥಾ ಪಟ್ಟಣದ ಬಂಡಳ್ಳಿ ರಸ್ತೆ ಎಚ್ ನಾಗಪ್ಪ ವೃತ್ತ, ಅಂಬೇಡ್ಕರ್ ವೃತ್ತದ ವರೆಗೆ ಮತದಾನದ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಅಭಿಯಂತರ ನಾಗೇಂದ್ರ, ದ್ವಿತೀಯ ದರ್ಜೆ ಸಹಾಯಕರುಗಳಾದ ಮಾದೇಶ್, ಪ್ರತಾಪ್, ಕರ ವಸೂಲಿಗಾರ ಭರತ್, ಜೂನಿಯರ್ ಪ್ರೋಗ್ರಾಮರ್ ನಾಗೇಂದ್ರ ಆಕೌಂಟೆಂಟ್ ದೇವಿಕಾ, ಸಿಬ್ಬಂದಿಗಳಾದ ಸುಷ್ಮಾ, ರಾಕೇಶ್, ಶ್ರೀನಿವಾಸ್, ಸುನಿಲ್, ಪೊಲೀಸ್ ಪೇದೆ ವಿಶ್ವನಾಥ್ ಸೇರಿದಂತೆ ಇನ್ನಿತರರು ಹಾಜರಿದ್ದರು.



ವಿವಿಧ ರಸ್ತೆಗಳಲ್ಲಿ ಪಥ ಸಂಚಲನ

ತಿಪಟೂರು: ಲೋಕಸಭಾ ಚುನಾವಣೆ ಶಾಂತಿಯುತವಾಗಿ ನಡೆಯುವ ಸಲುವಾಗಿ ಮತದಾರರು ನಿರ್ಭೀತಿಯಿಂದ ಮತ ಚಲಾಯಿಸಲು ನಿಮ್ಮೊಂದಿಗೆ ನಾವಿದ್ದೇವೆ ಎಂಬ ಸಂದೇಶದೊಂದಿಗೆ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಯ 52 ಯೋಧರು ಮತ್ತು ತಾಲ್ಲೂಕು ಪೊಲೀಸ್ ಇಲಾಖೆಯಿಂದ ತಿಪಟೂರು ನಗರ ವ್ಯಾಪ್ತಿಯ ದೊಡ್ಡಪೇಟೆ, ಬಿ.ಎಚ್ ರಸ್ತೆ ಮಾಯಿಸಂದ್ರ ಗಾಂಧಿನಗರ, ಇಂದಿರಾನಗರ ಸೇರಿದಂತೆ ವಿವಿಧ ರಸ್ತೆಗಳಲ್ಲಿ ಪಥ ಸಂಚಲನ ಕಾರ್ಯಕ್ರಮವನ್ನು ನಡೆಸಿ ಮತದಾರರಲ್ಲಿ ಆತ್ಮವಿಶ್ವಾಸವನ್ನು ತುಂಬಿದರು. ಪಥ ಸಂಚಲನ ಕಾರ್ಯಕ್ರಮದಲ್ಲಿ ನಗರದ ಜನತೆ ಯೋಧರಿಗೆ ಹೂಮಾಲೆ, ಪುಷ್ಪ ನಮನ ಸಲ್ಲಿಸಿ ಗೌರವದಿಂದ ಬರಮಾಡಿಕೊಂಡರು. ಸಂದರ್ಭದಲ್ಲಿ ಡಿವೈಎಸ್ಪಿ ವಿನಾಯಕ್ ಶಟಗೇರಿ, ನಗರ ವೃತ್ತ ನಿರೀಕ್ಷಕ ವೆಂಕಟೇಶ್, ಹೊನ್ನವಳ್ಳಿ ಆರಕ್ಷಕ ಠಾಣೆಯ ರಾಜೇಶ್ ಮುಂತಾದವರು ಭಾಗವಹಿಸಿದ್ದರು.

ಮೃಗಾಲಯದ ಪ್ರಾಣಿಯ ದತ್ತು ಸ್ವೀಕಾರ

ಮೈಸೂರು: ಭಾರತ ಕ್ರಿಕೆಟ್ ತಂಡದ ಆಟಗಾರ್ತಿಯಾದ ವೇದಾ ಕೃಷ್ಣಮೂರ್ತಿ ರವರು ಭಾವನಾ ಎಂಬ ಚಿರತೆಯನ್ನು ದಿನಾಂಕ 21.03.2024 ರಿಂದ 20.03.2025 ರವರೆಗೆ ಮತ್ತೊಂದು ವರ್ಷದ ಅವಧಿಗೆ ರೂ. 50000 ಗಳನ್ನು ಪಾವತಿಸಿ ದತ್ತು ಸ್ವೀಕಾರವನ್ನು ನವ

website: www.kayakayogi.com

ಕಾಯಕ ಯೋಗಿ

KAYAKA YOGI - Regional Daily

ಪುಟ-5 | 23-03-2024

ಹಾಸನ-ರಾಮನಗರ

ಧಾರ್ಮಿಕ ಸಂಸ್ಥೆಗಳಲ್ಲಿ ನಡೆಯುವ ಕಾರ್ಯಕ್ರಮಗಳ ವಿವರ ಸಲ್ಲಿಸಲು ಸೂಚನೆ

■ ಕಾಯಕಯೋಗಿ ಸುದ್ದಿ

ಹಾಸನ: ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ರಾಜಕೀಯ ಉದ್ದೇಶಕ್ಕಾಗಿ ಧಾರ್ಮಿಕ ಸಂಸ್ಥೆಗಳ ದುರುಪಯೋಗ ಮಾಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಾಸನ ಜಿಲ್ಲೆಯ ಎಲ್ಲ ದೇವಾಲಯಗಳು, ಚರ್ಚ್, ಮಸೀದಿ ಮತ್ತು ಎಲ್ಲಾ ಧಾರ್ಮಿಕ ಸಂಸ್ಥೆಗಳ ಮುಖ್ಯಸ್ಥರು, ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕೆಲವು ನಿಯಮಗಳನ್ನು ಪಾಲಿಸಲು ಜಿಲ್ಲಾಧಿಕಾರಿ ಸಿ.ಸತ್ಯಭಾಮಾ ಆದೇಶಿಸಿದ್ದಾರೆ.

ಹಾಸನ ಜಿಲ್ಲಾ ವ್ಯಾಪ್ತಿಯ ಎಲ್ಲಾ ಎಪಿಸಿಸಿ ವರ್ಗದ ಮುಜರಾಯಿ ಮತ್ತು ಖಾಸಗಿ ದೇವಾಲಯಗಳು ಹಾಗೂ ಚರ್ಚ್, ಮಸೀದಿ ಮತ್ತು ಇತರೆ ಎಲ್ಲಾ ಧಾರ್ಮಿಕ ಸಂಸ್ಥೆಗಳು ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಸಮಯದಲ್ಲಿ ನಡೆಯಲಿರುವ ಎಲ್ಲಾ ಕಾರ್ಯಕ್ರಮಗಳ ಸಂಪೂರ್ಣ ವಿವರಗಳನ್ನು ಸಂಬಂಧಪಟ್ಟ ಸಹಾಯಕ ಚುನಾವಣಾಧಿಕಾರಿಗಳಿಗೆ ನೀಡಬೇಕು. ಹಾಸನ ಜಿಲ್ಲಾ ವ್ಯಾಪ್ತಿಯ ಎಲ್ಲಾ 'ಎ' 'ಬಿ' 'ಸಿ' ವರ್ಗದ ಮುಜರಾಯಿ ಮತ್ತು ಖಾಸಗಿ ದೇವಾಲಯಗಳು ಹಾಗೂ ಚರ್ಚ್, ಮಸೀದಿ ಮತ್ತು ಇತರ ಎಲ್ಲಾ ಧಾರ್ಮಿಕ ಸಂಸ್ಥೆಗಳು ಚುನಾವಣಾ ತಪಾಸಣಾ ತಂಡವನ್ನು(FST/VST) ತಮ್ಮ ವ್ಯಾಪ್ತಿಯ ಎಲ್ಲಾ ಧಾರ್ಮಿಕ ಸಂಸ್ಥೆಗಳಲ್ಲಿ ನಡೆಯುವ ಕಾರ್ಯಕ್ರಮಗಳಿಗೆ ಕಳುಹಿಸಿ ಯಾವುದೇ ರಾಜಕೀಯ ವ್ಯಕ್ತಿ/ಮುಖಂಡರುಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆಯೇ/ ಮಾತನಾಡಿದ್ದಾರೆಯೇ/ಆಯೋಜನೆ ಮಾಡಿದ್ದಾರೆಯೇ ಅಥವಾ ಇಲ್ಲವೇ ಎಂದು ಪರಿಶೀಲಿಸಬೇಕು. ಯಾವುದೇ ಧಾರ್ಮಿಕ ಸಂಸ್ಥೆಗಳನ್ನು ರಾಜಕೀಯ ಚಟುವಟಿಕೆಗಳ ಪ್ರಚಾರಕ್ಕಾಗಿ ಬಳಸಬಾರದೆಂದು ಕಾನೂನಿನಲ್ಲಿಯೂ ಸ್ಪಷ್ಟವಾಗಿರುತ್ತದೆ.

ಹಾಸನ ಜಿಲ್ಲಾ ವ್ಯಾಪ್ತಿಯ ಎಲ್ಲಾ 'ಎ' 'ಬಿ' 'ಸಿ' ವರ್ಗದ ಮುಜರಾಯಿ ಮತ್ತು ಖಾಸಗಿ ದೇವಾಲಯಗಳು ಹಾಗೂ ಚರ್ಚ್, ಮಸೀದಿ ಮತ್ತು ಇತರ ಎಲ್ಲಾ ಧಾರ್ಮಿಕ ಸಂಸ್ಥೆಗಳ ಅಧಿಕಾರಿಗಳು/ಮುಖ್ಯಸ್ಥರುಗಳು/ ಸಿಬ್ಬಂದಿಗಳು The Religious Institution (Prevention of Misuse) Act 1988 d Sec 09 ವಿವರಿಸಿರುವ ಮಾಹಿತಿಯನ್ನು ಸಂಬಂಧಪಟ್ಟ ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಲು ಹಾಗೂ ಸಂಬಂಧಪಟ್ಟ ಚುನಾವಣಾಧಿಕಾರಿಗಳಿಗೂ ಹಾಗೂ ಚುನಾವಣಾ ತಪಾಸಣಾ ತಂಡಗಳೂ ಸಹ ಮಾಹಿತಿ ನೀಡಲು ಸೂಚಿಸಿದೆ.

ದಮ್ಮನಿಂಗಳ ಮಂಜುನಾಥ್ ಕಾವ್ಯಶ್ರೀ ರಾಜ್ಯ ಪ್ರಶಸ್ತಿ



ಚನ್ನರಾಯಪಟ್ಟಣ: ಭಾನುವಾರ ಮಂಡ್ಯ ಗಾಂಧಿಭವನದಲ್ಲಿ ನಡೆದ ಡಾ. ಜೀಶಂಪ ಸಾಹಿತ್ಯ ವೇದಿಕೆ ಮಂಡ್ಯ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್, ಕಾವೇರಿ ಪ್ರಭ ಹಾಗೂ ಕನ್ನಂಬಾಡಿ ದಿನಪತ್ರಿಕೆ ಇವರ ಆಶ್ರಯದಲ್ಲಿ ನಡೆದ ಪ್ರೇಮಕವಿ ಕೆ ಎಸ್ ನರಸಿಂಹ ಸ್ವಾಮಿ ಸ್ಮರಣಾರ್ಥವಾಗಿ 5ನೇ ಕನ್ನಡ ಅಕ್ಷರ ಜಾತ್ರೆ ಮತ್ತು ವಿವಿಧ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಚನ್ನರಾಯಪಟ್ಟಣ ತಾಲೂಕಿನ ಶ್ರವಣಬೆಳಗೊಳ ಹೋಬಳಿಯ ದಮ್ಮನಿಂಗಳ ಗ್ರಾಮದ ಉದಯೋನ್ಮುಖ ಕವಿ ಮತ್ತು ಕನ್ನಡ ಉಪನ್ಯಾಸಕರಾದ ಮಂಜುನಾಥ್ ದಮ್ಮನಿಂಗಳ ರವರಿಗೆ ಕಾವ್ಯಶ್ರೀ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇವರು ಕೃಷ್ಣರಾಜಪೇಟೆ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ನೀರು ಸರಬರಾಜಿನಲ್ಲಿ ವ್ಯತ್ಯಯ

ರಾಮನಗರ: ರಾಮನಗರ ಮತ್ತು ಚನ್ನಪಟ್ಟಣ ನಗರಗಳಿಗೆ ತೊರೆಕಾಡನಹಳ್ಳಿಯಿಂದ ಕಾವೇರಿ ನೀರು ಕುಡಿಯುವುದಕ್ಕಾಗಿ ಸರಬರಾಜಾಗುತ್ತಿದ್ದು, ಜೆ.ಬ್ಯಾಡರಹಳ್ಳಿ ಗ್ರಾಮದ ಬಳಿ ಕಾರೇಕೊಪ್ಪ ಗೇಟ್ ಬಳಿ ಇರುವ 610 ಎಂ.ಎಂ ವ್ಯಾಸದ ಏರು ಕೊಳವೆ ಮಾರ್ಗದಲ್ಲಿ ನೀರಿನ ಸೋರಿಕೆಯಾಗುತ್ತಿದ್ದು, ಇದನ್ನು ತಡೆಗಟ್ಟುವ ಸಲುವಾಗಿ ದುರಸ್ತಿ ಮಾಡಲು ತುರ್ತು ಕಾಮಗಾರಿಯನ್ನು ಮಾ. 23 ಹಾಗೂ 24 ರಂದು ಕೈಗೆತ್ತಿಕೊಳ್ಳಲಾಗಿದೆ. ಆದ್ದರಿಂದ ರಾಮನಗರ ಮತ್ತು ಚನ್ನಪಟ್ಟಣ ನಗರಕ್ಕೆ ಎರಡು ದಿನಗಳು ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತದೆ. ಸಾರ್ವಜನಿಕರು ನಗರಸಭೆ ಮತ್ತು ಜಲಮಂಡಳಿಯವರೊಂದಿಗೆ ಸಹಕರಿಸುವಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಚನ್ನಪಟ್ಟಣ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಳೂರು ಗ್ರಾಪಂ: ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ

■ ಕಾಯಕಯೋಗಿ ಸುದ್ದಿ

ರಾಮನಗರ: ಲೋಕಸಭಾ ಚುನಾವಣೆ-2024ರ ಅಂಗವಾಗಿ ಮತದಾನ ಜಾಗೃತಿಗಾಗಿ ರಾಮನಗರ ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ಸ್ವೀಪ್ ಸಮಿತಿ ಹಾಗೂ ಮಳೂರು ಗ್ರಾಮ ಪಂಚಾಯಿತಿ ವತಿಯಿಂದ ತಾಲ್ಲೂಕಿನ ಸ್ವ-ಸಹಾಯ ಒಕ್ಕೂಟದ ಮಹಿಳೆಯರನ್ನು (ಎಂಬಿಕೆ) ಒಗ್ಗೂಡಿಸಿ ಆಯೋಜಿಸಲಾಗಿದ್ದ ಜಾಥಕ್ಕೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮನು ಪಿ.ಕೆ ಅವರು ಚಾಲನೆ ನೀಡಿ ಮತದಾನದಿಂದ ಯಾರಾರು ದೂರ ಉಳಿಯಬಾರದು. ಮತದಾನ ನಮ್ಮೆಲ್ಲರ ಹಕ್ಕು, ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡಬೇಕು. ಇದರ ಪ್ರಭುದ್ಧತೆಯನ್ನು ಜನರಿಗೆ ಮನವರಿಕೆ ಮಾಡಿ ಕೊಡುವುದು



ಸಮಾಜ ಸೇವೆಯ ಕೆಲಸ ಆಗಿದೆ ಎಂದರು. ಸ್ವ-ಸಹಾಯ ಒಕ್ಕೂಟದ ಮಹಿಳೆಯರು ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಜನರಿಗೆ ಮತದಾನದ ಬಗ್ಗೆ ಅರಿವು ಮೂಡಿಸಿ ಏಪ್ರಿಲ್ 26 ರಂದು ಮತಗಟ್ಟೆಗಳಿಗೆ ಹೋಗಿ ಮತದಾನ ಮಾಡಬೇಕು ಎಂದರು.

ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಸಿದ್ದರಾಜು ಅವರು ಮಾತನಾಡಿ, ನಮ್ಮ ಭಾರತ ಪ್ರಜಾಪ್ರಭುತ್ವ ದೇಶದಲ್ಲೆ ಅತಿ ದೊಡ್ಡ ದೇಶವಾಗಿದೆ. ಲೋಕ ಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ಪ್ರತಿ ಗ್ರಾಮ ಪಂಚಾಯಿತಿಗಳಲ್ಲೂ ಸ್ವೀಪ್ ಕಾರ್ಯಕ್ರಮವನ್ನು ಹಮ್ಮಿಕೊಂಡು ಜಿಸಾವಣೆಯಲ್ಲಿ ಶೇ. 100 ರಷ್ಟು ಮತದಾನವಾಗಲು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಶಿಕಿರಣ್, ತಾಲ್ಲೂಕು ಐಇಸಿ ಸಂಯೋಜಕರಾದ ಭವ್ಯ ಎನ್‌ಆರ್ ಎಲ್‌ಎಂ ಒಕ್ಕೂಟದ ಸಿಬ್ಬಂದಿಗಳಾದ ಪರೀಶ್ ಬಾಬು, ಹೇಮಂತ್ ಕುಮಾರ್, ನಿಂಗರಾಜು, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಗೂ ತಾಲ್ಲೂಕಿನ ಎಂಬಿಕೆಗಳು ಭಾಗಿಯಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ವ್ಯಕ್ತಿ ನಾಪತ್ತೆ

■ ಕಾಯಕಯೋಗಿ ಸುದ್ದಿ

ಹಾಸನ: ಬೆಂಗಳೂರಿನಲ್ಲಿ ವಾಸವಾಗಿದ್ದ ರಫಾ ಪ್ರಸಾದ್ ಬಿನ್ ರಾಮಣ್ಣ(47) ಎಂಬವರು ನಾಪತ್ತೆಯಾಗಿರುವ ಬಗ್ಗೆ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇವರು ಫೆ.24 ರಂದು ಹಾಸನ ಉದಯಗಿರಿ ಬಡಾವಣೆಯ ಸಂಬಂಧಿಕರ ಮನೆಗೆ ಬಂದಿದ್ದು, ಫೆ.25 ರಂದು ಬೆಳಿಗ್ಗೆ 9.30 ಗಂಟೆಗೆ ಹೋಂಡಾ ಆಕ್ಟಿವ ಸ್ಕೂಟಿಯನ್ನು ತೆಗೆದುಕೊಂಡು ಬರುತ್ತೇನೆ ಎಂದು ಹೇಳಿ ಹೋದವರು, ಹಿಂದಿರುಗಿ ಬಾರದೆ ನಾಪತ್ತೆಯಾಗಿರುತ್ತಾರೆ.

ಚಹರೆ : ಎತ್ತರ 5. 5 ಅಡಿ ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ ಕೋಲು ಮುಖ. ಕಪ್ಪು ಬಿಳಿ ಕೂದಲು, ಕನ್ನಡ, ತಮಿಳು, ಹಿಂದಿ ಭಾಷೆ ಮಾತನಾಡುತ್ತಾರೆ. ಕಪ್ಪು ಗೆರೆಯುಳ್ಳ ಬಿಳಿ ಶರ್ಟ್ ಮತ್ತು ಕಪ್ಪು ಪ್ಯಾಂಟ್ ಧರಿಸಿರುತ್ತಾರೆ.

ಮಾಹಿತಿ ಸಿಕ್ಕಲ್ಲಿ ಬಡಾವಣೆ ಪೊಲೀಸ್ ಠಾಣೆ 08172-268967 ಆರಕ್ಷಕ ನಿರೀಕ್ಷಕರು 9480804730 ನಿರೀಕ್ಷಕರು 9480804747, ಪೊಲೀಸ್ ಉಪಾಧೀಕ್ಷಕರು ಹಾಸನ ಕಚೇರಿ ಅಥವಾ 08172-268964, ಕಂಟ್ರೋಲ್ ರೂಂ 08172-268845/ 268500 ಅಥವಾ 112 ಗೆ extensionhsn@ksp.gov.in ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ವ್ಯಕ್ತಿ ಮೇಲೆ ಹಲ್ಲೆ: ಏಳು ಮಂದಿ ಆರೋಪಿಗಳಿಗೆ ಶಿಕ್ಷೆ

■ ಕಾಯಕಯೋಗಿ ಸುದ್ದಿ

ಕನಕಪುರ : ತಾಲೂಕಿನ ಮರಳವಾಡಿ ಹೋಬಳಿ ಮರಳ ದೊಡ್ಡಿ ಗ್ರಾಮದಲ್ಲಿ ಮನೆಯಲ್ಲಿದ್ದ ವ್ಯಕ್ತಿಯೋರ್ವನ ಮೇಲೆ ಗಂಭೀರ ಹಲ್ಲೆ ನಡೆಸಿದ್ದ ಏಳು ಮುಂದೆ ಆರೋಪಿಗಳಿಗೆ ಏಳು ವರ್ಷ ಸೆರೆವಾಸ ಹಾಗೂ ತಲಾ 7 ಸಾವಿರ ರೂಗಳ ದಂಡವನ್ನು ಕನಕಪುರ ಪ್ರಿನ್ಸಿಪಾಲ್ ಸಿವಿಲ್ ಮತ್ತು ಜೆ.ಎಂ.ಎಫ್. ಸಿ. ನ್ಯಾಯಾಲಯದ ನ್ಯಾಯಾಧೀಶರಾದ ಸುರೇಶ್ ಅಣ್ಣಪ್ಪ ಸನದಿ ಶಿಕ್ಷೆ ವಿಧಿಸಿದ್ದಾರೆ.

2012ರಲ್ಲಿ ಮರಳವಾಡಿ ಹೋಬಳಿ ಮರಳದೊಡ್ಡಿ ಗ್ರಾಮದ ವೆಂಕಟೇಶ್ ಎಂಬುವರ ಮೇಲೆ ಅದೇ ಗ್ರಾಮದ ವಾಸಿಗಳಾದ ಕುಮಾರ, ತಿಮ್ಮರಾಯಿ, ವೆಂಕಟೇಶ, ನಾಗರಾಜು, ಚೆನ್ನಯ್ಯ, ಮುತ್ತುರಾಜು, ಮುತ್ತುರಾಜು ಎಂಬುವವರು ವೆಂಕಟೇಶ್ ಮೇಲೆ ಏರಿಗಿ ಗಂಭೀರ ಅಲ್ಲೇ ನಡೆಸಿದ್ದು ಹಾರೋಹಳ್ಳಿ ಪೊಲೀಸ್ ಠಾಣೆಗೆ ದೂರು ದಾಖಲಾಗಿತ್ತು. ಪೊಲೀಸರು ತನಿಖೆ ಕೈಗೊಂಡು ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿದ ಹಿನ್ನೆಲೆಯಲ್ಲಿ ಈ ಶಿಕ್ಷೆಯ ಆದೇಶ ಹೊರ ಬಿದ್ದಿದೆ.

ಕಾಂಗ್ರೆಸ್ ಪಕ್ಷದ ವಿರುದ್ಧ ಮತ ಚಲಾಯಿಸುವಂತೆ ರಾಜ್ಯವ್ಯಾಪಿ ಆಂದೋಲನ

■ ಕಾಯಕಯೋಗಿ ಸುದ್ದಿ

ಕನಕಪುರ : ಲೋಕಸಭಾ ಚುನಾವಣೆಯ ದೃಷ್ಟಿಯಿಂದ ತಮಿಳುನಾಡಿನ ಮುಖ್ಯಮಂತ್ರಿ ಸ್ಟಾಲಿನ್ ರವರು ಚುನಾವಣಾ ಪ್ರಣಾಳಿಕೆ ಬಿಡುಗಡೆ ಮಾಡಿದ್ದು ಅದರಲ್ಲಿ ಯಾವುದೇ ಕಾರಣಕ್ಕೂ ಕರ್ನಾಟಕ ದಲ್ಲಿ ಮೇಕೆದಾಟು ಅಣೆಕಟ್ಟು ನಿರ್ಮಾಣಕ್ಕೆ ಅವಕಾಶ ನೀಡುವುದಿಲ್ಲ ಎಂಬ ಅಂಶವನ್ನು ಬಿಡುಗಡೆ ಗೊಳಿಸಿರುವುದು ಬಹಳ ಖಂಡನೀಯ ಸಂಗತಿಯಾಗಿದೆ.

ಡಿಎಂಕೆ ಪಕ್ಷವು INDIA ಮೈತ್ರಿಕೂಟದ ಮಿತ್ರ ಪಕ್ಷವಾಗಿದೆ. ಒಂದೆಡೆ ಕರ್ನಾಟಕದಲ್ಲಿ ಮೇಕೆದಾಟು ಪಾದಯಾತ್ರೆ ಮಾಡುವ ಮೂಲಕ ಕಾಂಗ್ರೆಸ್ ಪಕ್ಷವು ಕನ್ನಡಿಗರ ಆಶಾ ಭಾವನೆಯನ್ನು ಮತವನ್ನಾಗಿಸಿಕೊಂಡು ಅಧಿಕಾರಕ್ಕೆ ಬಂದು ಈಗ ಮೇಕೆದಾಟು ಯೋಜನೆಯನ್ನು ಸಂಪೂರ್ಣ ಮರೆತಿದೆ. ಮತ್ತೊಂದೆಡೆ ಅದರ ಮಿತ್ರ ಪಕ್ಷ ಡಿಎಂಕೆ



ಈಗ ಮೇಕೆದಾಟು ಕಟ್ಟಲು ಬಿಡುವುದಿಲ್ಲ ಎಂಬ ಪ್ರಣಾಳಿಕೆಯ ಅಂಶದಿಂದ ಕನ್ನಡಿಗರ ಸ್ವಾಭಿಮಾನ ಕೆಣಕುತ್ತಿದೆ. ಕೆಲವು ದಿನಗಳ ಹಿಂದೆ ಸುಳ್ಳು ಹೇಳಿ ಕದ್ದು ಮುಚ್ಚಿ ತಮಿಳುನಾಡಿಗೆ ನೀರು ಹರಿಸಿದ ಕಾಂಗ್ರೆಸ್ ಸರ್ಕಾರವು ಈಗ ಡಿಎಂಕೆ ನಿಲುವನ್ನು ಖಂಡಿಸದೆ ಗುಲಾಮಗಿರಿ ಮೆರೆಯುತ್ತಿದೆ.

ಕರ್ನಾಟಕದಲ್ಲಿ ಈಗ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸಿದರೆ ಮಿತ್ರಕೂಟದ ಮೇಕೆದಾಟು ನಿರ್ಮಾಣ ತಡೆ ಸಂಕಲ್ಪ ಕ್ಕೆ ಕನ್ನಡಿಗರು ಒಪ್ಪಿದಂತಾಗುತ್ತದೆ. ಆದ್ದರಿಂದ ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರವು ತಕ್ಷಣವೇ ಮೇಕೆದಾಟು ವಿಚಾರದಲ್ಲಿ ತನ್ನ ನಿಲುವನ್ನು ಸ್ಪಷ್ಟಪಡಿಸಿ ಡಿಎಂಕೆ ಪಕ್ಷವನ್ನು ಮೈತ್ರಿಯಿಂದ ಹೊರ ಹಾಕಲು ಪ್ರಗತಿಪರ ಸಂಘಟನೆಗಳು 7 ದಿನಗಳ ಗಡುವನ್ನು ನೀಡುತ್ತಿವೆ. ಇದನ್ನು ನಿರ್ಲಕ್ಷಿಸಿದರೆ ಅನಂತರ ಎಲ್ಲಾ ಸಂಘಟನೆಗಳ ನಾಯಕರ ಸಭೆ ಕರೆದು ಇಡೀ ರಾಜ್ಯದಲ್ಲಿ ಮಿತ್ರಪಕ್ಷದ ನಿಲುವಿಗೆ ಅಂಕಿಕೊಂಡು ಕನ್ನಡಿಗರಿಗೆ ಮೋಸ ಮಾಡುತ್ತಿರುವ ಕಾಂಗ್ರೆಸ್ ಪಕ್ಷದ ವಿರುದ್ಧ ಮತ ಚಲಾಯಿಸುವಂತೆ ರಾಜ್ಯವ್ಯಾಪಿ ಆಂದೋಲನ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡುತ್ತಿದ್ದೇವೆ.

ಪ್ರಗತಿಪರ ಸಂಘಟನೆಗಳ ಅಧ್ಯಕ್ಷರಾದ ಕುಮಾರಸ್ವಾಮಿ, ಸ್ವತಂತ್ರ ಕರ್ನಾಟಕ ರಕ್ಷಣಾ ವೇದಿಕೆಯ ಕನ್ನಡ ಭಾಸ್ಕರ್, ಕೆ ಆರ್ ಎಸ್ ಪಕ್ಷದ ಪ್ರಾಂತ್ ಹೊಸದುರ್ಗ, ಜಿಲ್ಲಾ ಲೆಖರ ವೇದಿಕೆ ಅಧ್ಯಕ್ಷ ಕೂ ಗಿ ಗಿರಿಯಪ್ಪ ರೈತ ಘಟಕದ ನಲ್ಲಹಳ್ಳಿ ಶ್ರೀನಿವಾಸ್, ಶಿವರಾಜ್ , ಅಸ್ಗರ್ , ದುರ್ಗೇಶ್, ಹಾಗೂ ಮಿಲ್ಟ್ರಿ ರಾಮಣ್ಣ ಉಪಸ್ಥಿತರಿದ್ದರು.

ಮಾ.24ರಂದು ಆದಿಚುಂಚನಗಿರಿಜಾತ್ರಾ ಮಹೋತ್ಸವ

ರಾಮನಗರ: ಆದಿಚುಂಚನಗಿರಿ ಜಾತ್ರಾ ಮಹೋತ್ಸವದ ಪ್ರಯುಕ್ತ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಮಾ-24 ಭಾನುವಾರದಂದು 10ನೇ ವರ್ಷದ ಅರವಟಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬಿಜಿಎಸ್ ಭಕ್ತವೃಂದ ಪ್ರಕಟಣೆಯಲ್ಲಿ ತಿಳಿಸಿದೆ.

ರಾಮನಗರ ಶಾಖಾ ಮಠದ ಶ್ರೀ ಅನ್ನದಾನೇಶ್ವರನಾಥಸ್ವಾಮೀಜಿ ಅವರ ನೇತೃತ್ವದಲ್ಲಿ ರಾಮನಗರ ಜಿಲ್ಲಾ ಬಿಜಿಎಸ್ ಭಕ್ತವೃಂದ, ಹಾಗೂ ರಾಮನಗರ ವಿಭಾಗದ ಕೆಎಸ್‌ಆರ್‌ಟಿಸಿ ಸೌಕರದ ಬಳಗದ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ಭಾನುವಾರ ಬೆಳಿಗ್ಗೆ 9 ಗಂಟೆಗೆ ವಿಶೇಷ ಪೂಜೆ. ನಂತರ ಭಕ್ತಾದಿಗಳಿಗೆ ಅನ್ನಸಂತರ್ಪಣೆ ನೆರವೇರಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ಭಕ್ತಾದಿಗಳು ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸುವಂತೆ ಆಯೋಜಕರು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಅರವಂಟಿಗೆಗೆ ಸಹಕಾರ ನೀಡುವ ಭಕ್ತಾದಿಗಳು 9902969122, ಕರೆ ಮಾಡಿ ನೆರವು ನೀಡಬಹುದಾಗಿದೆ. ಮತ್ತು ಮಾ-23 ರ ರಾತ್ರಿ ವೇಳೆಗೆ ತಲುಪಿಸುವಂತೆ ಮನವಿ ಮಾಡಲಾಗಿದೆ.

ಜಾತ್ರಾ ವಿಶೇಷ ಬಸ್ಸು ವ್ಯವಸ್ಥೆ: ಮಾ-25ರ ಬೆಳಿಗಿನ ಜಾವ ಆದಿಚುಂಚನಗಿರಿಯಲ್ಲಿ ನಡೆಯುವ ಶ್ರೀ ಗಂಗಾಧರೇಶ್ವರಸ್ವಾಮಿ ರಥೋತ್ಸವಕ್ಕೆ ತೆರಳುವ ಜಿಲ್ಲೆಯ ಭಕ್ತಾದಿಗಳಿಗೆ ಅನುಕೂಲವಾಗುವಂತೆ ಜಿಲ್ಲಾ ಕೇಂದ್ರ ರಾಮನಗರದಿಂದ ಆದಿಚುಂಚಗಿರಿ ಕ್ಷೇತ್ರಕ್ಕೆ ಹೋಗಲು ಮತ್ತು ಆದಿಚುಂಚನಗಿರಿ ಕ್ಷೇತ್ರದಿಂದ ವಾಪಸ್ಸು ಬರಲು ಅನುಕೂಲವಾಗುವಂತೆ ಕೆಎಸ್‌ಆರ್‌ಟಿಸಿ ಮತಿಯಿಂದ ಜಾತ್ರಾ ವಿಶೇಷ ಬಸ್ಸುಗಳ ಸೌಕರ್ಯವನ್ನು ಕಲ್ಪಿಸಿದ್ದು, ಮಾ-24ರ ಭಾನುವಾರ ಬೆಳಿಗ್ಗೆ 6-30 ಗಂಟೆಯಿಂದ ರಾತ್ರಿ 9-30 ರವರಗೆ ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ವಿಶೇಷ ಬಸ್ ಸಂಚಾರ ಇರಲಿದ್ದು, ಜಾತ್ರೆಗೆ ತೆರಳುವ ಭಕ್ತರು ಇದರ ಸದುಪಯೋಗಪಡಿಸಿಕೊಳ್ಳುವಂತೆ ವಿಭಾಗೀಯ ನಿಯಂತ್ರಣಾಧಿಕಾರಿ ಎಂ. ಜಗದೀಶ್ ಮನವಿ ಮಾಡಿದ್ದಾರೆ.

ಹೋಳಿ ಹಬ್ಬದ ನಿಮಿತ್ತ ಸನಾತನ ಸಂಸ್ಥೆಯ ವಿಶೇಷ ಲೇಖನ !

ಹೋಳಿ ಹಬ್ಬವು ಭಾರತ ಮಾತ್ರವಲ್ಲ ವಿದೇಶಗಳಲ್ಲಿಯೂ ಆಚರಿಸಲ್ಪಡುವ ಬಣ್ಣಗಳ ಆನಂದೋತ್ಸವ ! ಪ್ರದೇಶಕ್ಕನುಸಾರ ಫಾಲ್ಗುಣ ಹುಣ್ಣಿಮೆಯಿಂದ ಪಂಚಮಿಯವರೆಗೆ ಅಥವಾ ರಂಗಪಂಚಮಿಯವರೆಗೆ 5-6 ದಿನಗಳಲ್ಲಿ ಕೆಲವು ಕಡೆ ಎರಡು ದಿನ ಮತ್ತು ಇನ್ನು ಕೆಲವು ಕಡೆಗಳಲ್ಲಿ ಐದು ದಿನಗಳವರೆಗೆ ಈ ಉತ್ಸವವನ್ನು ಆಚರಿಸುತ್ತಾರೆ. 2024ರಲ್ಲಿ ಹೋಳಿ ಹಬ್ಬವನ್ನು ಮಾರ್ಚ್ 24 ರಂದು ಆಚರಿಸಲಾಗುವುದು.

ಹೋಳಿ ಅಥವಾ ಹೋಲಿಕೆ ಎಂದರೆ ಒಂದು ದೇವಿಯೇ. ಅರಿಷ್ಟರ್ಗಳ ಮೇಲೆ ಜಯಗಳಿಸುವ ಕ್ಷಮತೆಯು ಈ ಹೋಲಿಕೆಯಲ್ಲಿರುತ್ತದೆ. ನಮ್ಮಲ್ಲಿರುವ ಅರಿಷಡ್ವರ್ಗಗಳ ನಾಶವಾಗಲೆಂದು ಹೋಲಿಕಾ ದೇವಿಯಲ್ಲಿ ಪ್ರಾರ್ಥನೆಯನ್ನು ಸಲ್ಲಿಸಲಾಗುತ್ತದೆ.

ಹೋಳಿಯನ್ನು ಏಕೆ ಆಚರಿಸುತ್ತೇವೆ ?

ಹೋಳಿ ಎಂದರೆ ಅಗ್ನಿ ದೇವತೆಯ ಉಪಾಸನೆಯ (ಪೂಜೆಯ) ಒಂದು ಅ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–6 | 23–03–2024
ಬೆಂಗಳೂರು

ಕುಡಿಯುವ ನೀರು ಸಮಸ್ಯೆ ಪರಿಹಾರಕ್ಕಾಗಿ ಸಹಾಯವಾಣಿ ಸೌಲಭ್ಯ

■ ಕಾಯಕಯೋಗಿ ಸುದ್ದಿ

ಮಂಡ್ಯ : ಜಿಲ್ಲೆಯ ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಕುರಿತು ಸ್ವೀಕೃತವಾಗುವ ದೂರುಗಳನ್ನು ದಾಖಲಿಸಲು ಮಂಡ್ಯ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ 24/7 ಕಂಟ್ರೋಲ್ ರೂಮ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಕುಡಿಯುವ ನೀರಿನ ಸಮಸ್ಯೆ ದೂರು ಇದ್ದಲ್ಲಿ ಸಹಾಯವಾಣಿ ಸಂಖ್ಯೆ 08232–229624 ಕ್ಕೆ ಕರೆ ಮಾಡಿ ದೂರು ದಾಖಲಿಸಬಹುದಾಗಿದೆ. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಸಮರ್ಪಕ ಕುಡಿಯುವ ನೀರಿನ ಮೇಲ್ವಿಚಾರಣೆಗಾಗಿ ಜಿಲ್ಲಾ ಪಂಚಾಯಿತಿಯ ವತಿಯಿಂದ ತಾಲೂಕಿಗೆ ಒಬ್ಬರಂತೆ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗಗಳ ಸಹಾಯಕ ಕಾರ್ಯ ಪಾಲಕ ಅಭಿಯಂತರರುಗಳನ್ನು ನೇಮಕ ಮಾಡಿದ್ದು, ಕೃಷ್ಣರಾಜಪೇಟೆ ಕಾರ್ಯನಿರ್ವಾಹಕ ಅಧಿಕಾರಿಗಳ ಮೊ. ಸಂ. 9480872105, ಸಹಾಯಕ ಕಾರ್ಯಪಾಲಕ ಅಭಿಯಂತರರು (ಖಾಫಸು) ಮೊ. ಸಂ. 9632769002, ಮದ್ದೂರು ಕಾರ್ಯನಿರ್ವಾಹಕ ಅಧಿಕಾರಿಗಳ ಮೊ. ಸಂ. 9480872110, ಸಹಾಯಕ ಕಾರ್ಯಪಾಲಕ ಅಭಿಯಂತರರು (ಖಾಫಸು) ಮೊ. ಸಂ. 9448767960, ಮಳವಳ್ಳಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೊ. ಸಂ. 9480872115, ಸಹಾಯಕ ಕಾರ್ಯಪಾಲಕ ಅಭಿಯಂತರರು (ಖಾಫಸು) ಮೊ. ಸಂ. 807386903, ಮಂಡ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೊ. ಸಂ. 9480872100, ಸಹಾಯಕ ಕಾರ್ಯಪಾಲಕ ಅಬಿ (ಖಾಫಸು) ಮೊ. ಸಂ. 8431017502, ನಾಗಮಂಗಲ ಕಾರ್ಯನಿರ್ವಾಹಕ ಅಧಿಕಾರಿಗಳ ಮೊ. ಸಂ. 9480872120, ಸಹಾಯಕ ಕಾರ್ಯಪಾಲಕ ಅಭಿಯಂತರರು (ಖಾಫಸು) ಮೊ. ಸಂ. 7899105505, ಪಾಂಡವಪುರ ಕಾರ್ಯನಿರ್ವಾಹಕ ಅಧಿಕಾರಿಗಳ ಮೊ. ಸಂ. 9480872125, ಸಹಾಯಕ ಕಾರ್ಯಪಾಲಕ ಅಭಿಯಂತರರು (ಖಾಫಸು) ಮೊ. ಸಂ. 9900568915, ಶ್ರೀರಂಗಪಟ್ಟಣ ಕಾರ್ಯನಿರ್ವಾಹಕ ಅಧಿಕಾರಿಗಳ ಮೊ. ಸಂ. 9480872130 ಸಹಾಯವಾಣಿಗಳಾಗಿದ್ದು, ಇವುಗಳನ್ನು ಸಂಪರ್ಕಿಸಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಸಮಸ್ಯೆಗಳ ಪರಿಹಾರವನ್ನು ಪಡೆಯಬಹುದು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯಾವುದೇ ಆಮಿಷಗಳಿಲ್ಲದೇ ನಿಮ್ಮ ಮತ ಬೆಂಬಲ ನನಗಿರಲಿ

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ: ಚಿಕ್ಕಬಳ್ಳಾಪುರ ಕ್ಷೇತ್ರದ ಜನತೆಯು ಹಲವಾರು ವರ್ಷಗಳಿಂದ ಮೂಲಭೂತ ಸೌಕರ್ಯಗಳಾದ ರಸ್ತೆ ,ಚರಂಡಿ, ಆರೋಗ್ಯ ಪ್ರಾಥಮಿಕ ಕೇಂದ್ರಗಳಲ್ಲಿ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದೆ ಅದ್ದರಿಂದ ಮತದಾರರಿಗೆ ಯಾವುದೇ ಆಮಿಷಗಳಲ್ಲದೆ ನಿಮ್ಮ ಮತ ಬೆಂಬಲ ನನಗಿದ್ದಲ್ಲಿ ಕ್ಷೇತ್ರದ ಜನತೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ನನ್ನ ಮೊದಲ ಆದ್ಯತೆವಾಗಿರುತ್ತದೆ ಎಂದು ಪಕ್ಷೇತರ ಅಭ್ಯರ್ಥಿ ಡಾ.ಎಂ.ಆರ್.ರಂಗನಾಥ್ ಹೇಳಿದರು.



ದೇವನಹಳ್ಳಿ ಪಟ್ಟಣದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಕ್ಷೇತ್ರದ ಜ್ವಲಂತ ಸಮಸ್ಯೆಗಳಾದ ಕುಡಿತಯವ ನೀರಿನ ಸಮಸ್ಯೆ, ಕೃಷಿ ಅಭಿವೃದ್ಧಿ ಆಗಿಲ್ಲಾ, ತೋಟಗಾರಿಕೆ, ರೇಷ್ಮೆ, ಕೃಷಿಗೆ, ಕೈಗಾರಿಕೆಗೆ ನೀರಾವರಿ ಅಭಿವೃದ್ಧಿ ಆಗಿಲ್ಲಾ,ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ರಸ್ತೆಗಳ ಸಮಸ್ಯೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ ಸಿಬ್ಬಂದಿ ಕೊರತೆ, ಗ್ರಾಮ, ಪಟ್ಟಣಗಳಲ್ಲಿ ಶುಚಿ ನೈರ್ಮಲ್ಯದ ಕೊರತೆ ಸೇರಿದಂತೆ ಇನ್ನು ಹಲವಾರು ಸಮಸ್ಯೆಗಳು ಎದುರಿಸುತ್ತಿದ್ದೇವೆ ಯಾವುದಕ್ಕೂ ಸೂಕ್ತವಾದ ಪರಿಹಾರವಾಗಿಲ್ಲಾ ಇವೆಲ್ಲವನ್ನು ಧ್ವನಿಯಾಗಿ ಮಾತನಾಡಲು ಕೇಂದ್ರ ಸರ್ಕಾರಕ್ಕೆ ಮುಟ್ಟಿಸಲು ನನಗೆ ಈ ಬಾರಿ ಅವಕಾಶ ನೀಡಿ ಎಂದು ಮನವಿ ಮಾಡಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಹಲವು ಜ್ವಲಂತ ಸಮಸ್ಯೆಗಳು ಎದುರಿಸುತ್ತಿದ್ದರೆವೆ ಈ ಹಿಂದೆ ನಮ್ಮನ್ನು ಆಳದ ರಾಷ್ಟ್ರೀಯ ಪಕ್ಷಗಳಿಂದ ಯಾವುದೇ ಸಮಸ್ಯೆಗಳಿಗೆ ಪರಿಹಾರ ದೊರೆತಿಲ್ಲಾ ಅವರ ಕೊಡುಗೆ ಶೂನ್ಯ ಮೂಲಭೂತ ಸೌಕರ್ಯಗಳ ಲಭ್ಯತೆ ಇಲ್ಲಾ ಆದ್ದರಿಂದ ನಾನು ಲೋಕಸಭಾ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದೇನೆ ಎಲ್ಲರ ಸಹಕಾರ ಕೋರುತ್ತಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಭಿಮಾನಿ ಬಳಗದ ಶಂಕರ್ ನಾರಾಯಣ್, ಕೇಶವಮೂರ್ತಿ,ರೋಹನ್ ಗೌಡ ಮತ್ತು ಪ್ರದೀಪ್ ಕುಮಾರ್ ಮತ್ತಿತರರು ಇದ್ದರು.

ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಶಾಸಕರಾದ ಸನ್ಮಾನ್ಯ ಶ್ರೀ ಎ.ಆರ್.ಕೃಷ್ಣಮೂರ್ತಿ 63ನೇ ವರ್ಷದ ಹುಟ್ಟುಹಬ್ಬದ ಶುಭಾಶಯಗಳು



ಶುಭ ಕೋರುವವರು



ರಾಘವೇಂದ್ರ ಪ್ರಸಾದ್ ಹೊನ್ನೂರು ಎ.ಆರ್.ಕೆ. ಅಭಿಮಾನಿ



ಪ್ರಭುಪ್ರಸಾದ್. ಎಸ್ ಗ್ಯಾರೆಂಟಿ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರು



ಕಂದಹಳ್ಳಿ ನಂಜುಂಡಸ್ವಾಮಿ ಎ.ಆರ್.ಕೆ ಅಭಿಮಾನಿ



ಎನ್.ಸತೀಶ್ ಬೂದಿತಿಟ್ಟು ಎ.ಆರ್.ಕೆ. ಅಭಿಮಾನಿ

ವರದಿ ಸಲ್ಲಿಸದಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿಯ ತಾಕೀತು: ಆರೋಪ

ಭ್ರೂಣ ಹತ್ಯೆ, ಗರ್ಭಪಾತ ಪ್ರಕರಣ: ಅಧಿಕಾರಿಗಳ ನಡುವೆ ತಿಕ್ಕಾಟ.!

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ: ಜಿಲ್ಲೆಯ ಹೊಸಕೋಟೆ ಹಾಗೂ ನೆಲಮಂಗಲ ಪಟ್ಟಣದಲ್ಲಿ ಭ್ರೂಣ ಹತ್ಯೆ, ಕಾನೂನು ಬಾಹಿರ ಗರ್ಭಪಾತ ಪ್ರಕರಣಕ್ಕೆ ಸಂಬಂಧಿಸಿದಂತೆ ವರದಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯಾದ (ಡಿಎಚ್ಓ) ಡಾ.ಸುನೀಲ್ ಕುಮಾರ್‌ರಿಗೆ ಸಲ್ಲಿಕೆ ಮಾಡದಂತೆ ಅವರು, ಮಾನಸಿಕ ಹಿಂಸೆ ನೀಡುತ್ತಿದ್ದಾರೆ ಎಂದು ಆರೋಪಿಸಿ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಆರ್.ಮಂಜುನಾಥ್ ಬುಧವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಆಯುಕ್ತಾಲಯಕ್ಕೆ ದೂರು ಸಲ್ಲಿಸಿದ್ದಾರೆ.



ಹೊಸಕೋಟೆಯ ತಿರುಮಲಶೆಟ್ಟಿಪಳ್ಳಿಯಲ್ಲಿರುವ ಎಸ್‌ಪಿಜಿ ಆಸ್ಪತ್ರೆ ವಿರುದ್ಧ ಭ್ರೂಣ ಹತ್ಯೆ ಕೇಸ್ ಹಾಗೂ ನೆಲಮಂಗಲದ ಆಸರೆ ಆಸ್ಪತ್ರೆಯಲ್ಲಿ ಕಾನೂನು ಬಾಹಿರವಾಗಿ 74 ಗರ್ಭಪಾತ ಮಾಡಿರುವ ಕೇಸ್ ದಾಖಲಾಗಿದ್ದು, ಅದಕ್ಕೆ ಸಂಬಂಧಿಸಿದ ವರದಿಯನ್ನು ಮೌಖಿಕವಾಗಿ ಡಿಎಚ್‌ಓಗೆ ತಿಳಿಸಿದಾಗ, ಲಿಖಿತ ವರದಿಯನ್ನು ಸಲ್ಲಿಕೆ ಮಾಡದಂತೆ ತಾಕೀತು ಮಾಡಿದ್ದರೂ, ಒಂದೊಮ್ಮೆ ವರದಿ ನೀಡಿದರೇ ಅನೇಕ ಕಗ್ಗಂಟುಗಳನ್ನು ಎದುರಿಸಬೇಕಾದಿತು ಎಂದು ಬೆದರಿಕೆಯನ್ನೂ ಹಾಕಿದ್ದಾರೆ ಎಂದು ಪತ್ರದಲ್ಲಿ ಆರೋಪಿಸಲಾಗಿದೆ.

ವರದಿ ಸಲ್ಲಿಕೆ ಮಾಡದಂತೆ ಸನ್ನಿವೇಶವನ್ನು ಸೃಷ್ಟಿಸಲು ಪದೇ ಪದೇ ನೋಟಿಸ್ ನೀಡಿ ಡಿಎಚ್‌ಓ ಕಿರುಕುಳ ನೀಡಿದ್ದಾರೆ, ಪ್ರಾಮಾಣಿಕವಾಗಿ ಕೆಲಸ ಮಾಡುವ ಮನಸ್ಸು ಮಾಡಿ ಯಾವ ಒತ್ತಡವನ್ನೂ ಲೆಕ್ಕಿಸದೇ ಮಾ.18ರಂದು ಡಿಎಚ್‌ಓ ಕಚೇರಿಯ ಟಪಾಲಿಗೆ ಲಿಖಿತ ವರದಿ ಸಲ್ಲಿಸಿದ್ದೇನೆ ಎಂದು ಆಯುಕ್ತಾಲಯಕ್ಕೆ ಸಲ್ಲಿಕೆಯಾಗಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಈಗಾಗಲೇ ನೆಲಮಂಗಲದ ಸ್ಥಳೀಯ ಪತ್ರಿಕೆಯಲ್ಲಿ ಭ್ರೂಣ ಹತ್ಯೆ ಕೇಸಿನ ಸಂಬಂಧಿಸಿದಂತೆ ವರದಿ ಪ್ರಕಟವಾದ ಬೆನ್ನಿಗೆ ಆರೋಪದಿಂದ ಮುಕ್ತವಾಗಲು, ಬೇರೆ ಅಧಿಕಾರಿಯನ್ನು ಬಲಿಪಶು ಮಾಡಲು ಡಿಎಚ್‌ಓ ಡಾ.ಸುನೀಲ್ ಕುಮಾರ್ ಇಲ್ಲ ಸಲ್ಲದ ದೂರ್ಗಳೆ ಮಾಡುಲು ಯತ್ನಿಸುತ್ತಿದ್ದು, ಇದರಿಂದ ಮಾನಸಿಕ ಸ್ಥಿಮಿತ ಕಳೆದುಕೊಂಡು ಪ್ರಾಣಕ್ಕೆ ತೊಂದರೆಯಾದರೇ ಅದಕ್ಕೆ ಅವರೇ ಕಾರಣ ಎಂದು ಪತ್ರದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ್ ತಿಳಿಸಿದ್ದಾರೆ.

ದೂರಿಗೆ ಸಂಬಂಧಿಸಿದಂತೆ ಸರ್ಕಾರಿ ಸೇವಾ ನಿಯಮಾವಳಿಗಳ ಅಡಿಯಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಲು ನನಗೆ ಅವಕಾಶವಿಲ್ಲ, ಅಗತ್ಯವಿದ್ದರೇ ಜಿಲ್ಲಾಧಿಕಾರಿಗಳು ಸುದ್ದಿಗೋಷ್ಠಿ ನಡೆಸುತ್ತಾರೆ

– ಡಾ.ಸುನೀಲ್ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ.



ಆರೋಗ್ಯ ತಪಾಸಣಾ ಶಿಬಿರಗಳು ಬಡ ಜನರಿಗೆ ಸಹಕಾರಿ



ದೇವನಹಳ್ಳಿ: ಪರಿಶುದ್ಧ ಗಾಳಿ ನೀರು ಆಹಾರವನ್ನು ನಾವು ಸದ್ಬಳಕೆ ಮಾಡಿಕೊಂಡು ಆರೋಗ್ಯಕರ ಜೀವನ ನಡೆಸಬೇಕು. ಅಂದರೆ ಜೀವನದಲ್ಲಿ ಸ್ವಚ್ಛತೆ ಹಾಗೂ ಶುದ್ಧತೆಯನ್ನು ಅಳವಡಿಸಿಕೊಳ್ಳಬೇಕು. ಎಂದು ಕೊಯಿರಾ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಕಾರಿ ಡಾ. ಚಂದ್ರಕಲಾ ತಿಳಿಸಿದರು.

ತಾಲೂಕಿನ ಕೊಯಿರಾ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಆಕಾಶ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಆಕಾಶ್ ವೈದ್ಯಕೀಯ ಮಹಾ ವಿಶ್ವವಿದ್ಯಾಲಯ ಮತ್ತು ಸಂಶೋಧನ ಕೇಂದ್ರ, ಬೂದಿಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಯಿರಾ ಪ್ರಾಥಮಿಕ ಆರೋಗ್ಯ ಕೇಂದ್ರ ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದರು. ಗ್ರಾಮೀಣ ಪ್ರದೇಶದ ಬಡ ಜನರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಸಹಕಾರಿಯಾಗಿದೆ. ರೋಗಿಗಳು ಬರುವ ಮುನ್ನ ಎಚ್ಚರವಹಿಸಿದರೆ ಆಸ್ಪತ್ರೆ ಮತ್ತು ಮಾತ್ರೆಗಳಿಂದ ದೂರವಿರಬಹುದು. ಆರೋಗ್ಯವಾಗಿದ್ದರೆ ಸುಖವಾಗಿ ಬಾಳಬಹುದು. ಇಲ್ಲವಾದರೆ ದುಡಿದಾಡವನ್ನು ಆಸ್ಪತ್ರೆ ಖರ್ಚು ಮಾಡಬೇಕಾಗುತ್ತದೆ. ಆದ್ದರಿಂದ ರೋಗದ ಲಕ್ಷಣ ಕಾಣುವ ಮುನ್ನವೇ ಹಾಗಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯರು ನೀಡುವ ಸಲಹೆ ಪಾಲಿಸಬೇಕು ಎಂದು ಹೇಳಿದರು.

ಈ ವೇಳೆಯಲ್ಲಿ ಪ್ರೊಫೆಸರ್ ಡಾ. ಸಿಂಧು ,ವೈದ್ಯರಾದ ಅವಂತಿ, ಡಾ. ವಿವಾರಿಕ, ಡಾ. ಕಿರಣ್, ಡಾ.ತನುಶ್ರೀ,ಡಾ. ಪ್ರೀತಿ, ಡಾ. ರಾಕೇಶ್, ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವರ್ಗ ಇದ್ದರು.



Published and Owned by : Smt. ARUNA JYOTHI.B.K. From No.292, Basaveshwara Nilaya,Basaveshwara Marga, Kaveri Nagar Mandya. Printed By Somashekar Keragodu, ShanakaraNagara, Mandya. Printed by: Tejaswi Off Set Printers,No.726 Shankarnagar, Chandagalu Layout 1stCross.Mandya. 571401 Mandya Dist.,Karnataka Steate Editor : ARUNAJYOTHI.B.K.